ಶುಕ್ರವಾರ 06.02.2026
ಬೆಂಗಳೂರು, ಬೆಲೆ: 5ರೂ.2 ಪುಟಗಳು
ಸಂಪುಟ 01 – ಸಂಚಿಕೆ 137

Digital Varthe Kannada Daily
Volume 01 - Issue 137
Friday, 06.02.2026
Price: 5/- Rs
2 Pages Bangalore

PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡಿಗರ ಶಕ್ತಿ
ಕನ್ನಡ ದಿನಪತ್ರಿಕೆ
DIGITAL VARTHE
digitalvarthe@gmail.com
www.digitalvarthe.com

## ಕಳ್ಳತನಕ್ಕೆ ಹೋಗಿ ಸಿಕ್ಕಿಬಿದ್ದು, ಪೆಟ್ಟು ತಿಂದ ಬಳಿಕ ಪೊಲೀಸರಿಗೆ ದೂರು!



**ಬೆಂಗಳೂರು:** ಕಳ್ಳತನಕ್ಕೆ ಹೋಗುವ ವೇಳೆ ಯಾರಾದರೂ ಹಿಡಿದರೆ ಹಲ್ಲೆ ಮಾಡಿ ತಪ್ಪಿಸಿಕೊಳ್ಳುವ ಘಟನೆಗಳು ಅಥವಾ ಸಿಕ್ಕಿಬಿದ್ದು ಜೈಲು ಸೇರಿದ ಖದೀಮರ ಕಥೆಗಳು ಸಾಮಾನ್ಯವಾಗಿ ಕೇಳಿ ಬರುತ್ತವೆ. ಆದರೆ ಸಿಲಿಕಾನ್ ಸಿಟಿ ಬೆಂಗಳೂರಿನಲ್ಲಿ ಇದಕ್ಕೆ ತಲೆಕೆಳಗಿನಂತಿ–ರುವ ಒಂದು ವಿಚಿತ್ರ ಪ್ರಕರಣ ಬೆಳಕಿಗೆ ಬಂದಿದೆ. ಮೊದಲ ಬಾರಿಗೆ ಕಳ್ಳತನಕ್ಕೆ ಹೋಗಿದ್ದ ವ್ಯಕ್ತಿಯೊಬ್ಬ ಮನೆಯವರ ಬಳಿ ಸಿಕ್ಕಿಬಿದ್ದು ಪೆಟ್ಟು ತಿಂದಿದ್ದು, ಬಳಿಕ ಅದೇ ಘಟನೆಗೆ ಸಂಬಂಧಿಸಿದಂತೆ "ನನ್ನ ಮೇಲೆ ಹಲ್ಲೆ ಮಾಡಿದ್ದಾರೆ" ಎಂದು ಪೊಲೀಸರಿಗೆ ದೂರು ನೀಡಿರುವುದು ಅಚ್ಚರಿಗೆ ಕಾರಣವಾಗಿದೆ.

ಆಟೋ ಚಾಲಕನಾಗಿ ಜೀವನ ನಡೆಸುತ್ತಿದ್ದ ಅಸ್ಗರ್ ಖಾನ್ ಎಂಬಾತ ಈ ಪ್ರಕರಣದ ಕೇಂದ್ರಬಿಂದ ುವಾಗಿದ್ದಾನೆ. ಪೊಲೀಸ್ ಮೂಲಗಳ ಪ್ರಕಾರ, ಅಸ್ಗರ್ ಕೆಟ್ಟ ಚಟಗಳಿಗೆ ದಾಸನಾಗಿದ್ದು, ದುಡಿದು ಗಳಿಸುವ ಹಣ ತನ್ನ ಖರ್ಚಿಗೆ ಸಾಲುತ್ತಿರಲಿಲ್ಲ. ಈ ನಡುವೆ ಆತನ ಸ್ನೇಹಿತರು ಕಳ್ಳತನ ಮಾಡಿ ಸುಲಭವಾಗಿ ಹಣ ಸಂಪಾದಿಸುತ್ತಿರುವುದನ್ನು ನೋಡಿದ ಅಸ್ಗರ್, ಅವರಿಂದ ಪ್ರೇರಿತನಾಗಿ ತಾನೂ ಕಳ್ಳತನ ಮಾಡಲು ನಿರ್ಧರಿಸಿದ್ದಾನೆ ಎನ್ನಲಾಗಿದೆ.


ಅದರಂತೆ ಅಸ್ಗರ್ ತನ್ನ ಇಬ್ಬರು ಸ್ನೇಹಿತರೊಂದಿಗೆ ಚಿಕ್ಕನಹಳ್ಳಿ ಪ್ರದೇಶದ ಅಪಾರ್ಟ್‌ಮೆಂಟ್ ಒಂದಕ್ಕೆ ಕಬ್ಬಿಣ ಕದಿಯುವ ಉದ್ದೇಶದಿಂದ ಕಾಂಪೌಂಡ್ ಹಾರಿದ್ದಾನೆ. ಆದರೆ ಈ ವೇಳೆ ಅಪಾರ್ಟ್‌ಮೆಂಟ್‌ನಲ್ಲಿ ವಾಸವಿದ್ದ ದಂಪತಿ ಇವರನ್ನು ಗಮನಿಸಿ ಪ್ರಶ್ನೆ ಮಾಡಿದ್ದಾರೆ. ಇದರಿಂದ ಕೋಪಗೊಂಡ ಅಸ್ಗರ್ ದಂಪತಿ ಮೇಲೆ ಹಲ್ಲೆ ನಡೆಸಿದ್ದಾನೆ ಎಂದು ಆರೋಪಿಸಲಾಗಿದೆ.

ಜಗಳ ತೀವ್ರಗೊಂಡ ತಕ್ಷಣ ಅಕ್ಕಪಕ್ಕದ ಮನೆಗಳ ನಿವಾಸಿಗಳು ಸ್ಥಳಕ್ಕೆ ಧಾವಿಸಿದ್ದು, ಜನ ಸೇರುತ್ತಿರುವುದನ್ನು ಕಂಡ ಅಸ್ಗರ್‌ನ ಇಬ್ಬರು ಸ್ನೇಹಿತರು ಆಟೋದಲ್ಲಿ ಅಲ್ಲಿಂದ ಎಸ್ಕೇಪ್ ಆಗಿದ್ದಾರೆ. ಆದರೆ ಅಸ್ಗರ್ ಮಾತ್ರ ಸ್ಥಳದಲ್ಲೇ ಸಿಕ್ಕಿಬಿದ್ದಿದ್ದು, "ಕಳ್ಳತನ ಮಾಡಲು ಬಂದಿದ್ದೀಯಾ?" ಎಂದು ಆಕ್ರೋಶಗೊಂಡ ಸ್ಥಳೀಯರು ಮರದ ತುಂಡಿನಿಂದ ಆತನ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ತಿಳಿದುಬಂದಿದೆ.

ಗಾಯಗೊಂಡ ಅಸ್ಗರ್ ಅಲ್ಲಿಂದ ತಪ್ಪಿಸಿಕೊಂಡು ಆಸ್ಪತ್ರೆಗೆ ತೆರಳಿ ಚಿಕಿತ್ಸೆ ಪಡೆದುಕೊಂಡಿದ್ದಾನೆ. ಬಳಿಕ ಆತ ನಡೆದ ಘಟನೆಯ ಬಗ್ಗೆ ಪೊಲೀಸರಿಗೆ ದೂರು ನೀಡಿದ್ದು, ಕಳ್ಳತನಕ್ಕೆ ಹೋದಾಗ ಅಪಾರ್ಟ್‌ಮೆಂಟ್ ನಿವಾಸಿಗಳು ಹಾಗೂ ಸ್ಥಳೀಯರು ತನ್ನ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ಆರೋಪಿಸಿದ್ದಾನೆ. ದೂರು ದಾಖಲಿಸುವ ವೇಳೆ, ಬಿಯರ್ ಬಾಟಲ್‌ನಿಂದ ಮಹಿಳೆ ಸೇರಿದಂತೆ ಇತರರ ಮೇಲೆ ತಾನು ಹಲ್ಲೆ ಮಾಡಿರುವುದನ್ನೂ ಅಸ್ಗರ್ ಒಪ್ಪಿಕೊಂಡಿದ್ದಾನೆ ಎಂದು ಪೊಲೀಸ್ ಮೂಲಗಳು ತಿಳಿಸಿವೆ.

ಈ ಪ್ರಕರಣದ ಸಂಬಂಧ ಸಂಪಿಗೆಹಳ್ಳಿ ಪೊಲೀಸರು ಅಸ್ಗರ್ ಖಾನ್‌ನನ್ನು ಬಂಧಿಸಿದ್ದು, ಕಳ್ಳತನದ ಪ್ರಯತ್ನ, ಹಲ್ಲೆ ಮತ್ತು ಇತರೆ ಆರೋಪಗಳ ಬಗ್ಗೆ ತನಿಖೆ ಮುಂದುವ–ರಿಸಿದ್ದಾರೆ. ಮೊದಲ ಬಾರಿಗೆ ಕಳ್ಳತನಕ್ಕೆ ಹೋಗಿ, ನಂತರ ತಾನೇ ಪೊಲೀಸರ ಬಳಿ ದೂರು ನೀಡಿರುವ ಈ ಘಟನೆ ನಗರದಲ್ಲಿ ಚರ್ಚೆಗೆ ಕಾರಣವಾಗಿದೆ.

## ಲವರ್‌ಗಾಗಿ ಪತಿಗೆ ಚಟ್ಟಕಟ್ಟಿದ್ದ ಪತ್ನಿ





**ದೇವನಹಳ್ಳಿ:** ಪ್ರಿಯಕರ ನಿಗಾಗಿ ಹೆಂಡತಿಯೇ ತನ್ನ ಗಂಡನನ್ನು ಹತ್ಯೆ ಮಾಡಿ, ಅದನ್ನು ಅಪಘಾತ ದಂತೆ ಬಿಂಬಿಸಲು ಯತ್ನಿಸಿದ್ದ ಆಘಾತಕಾರಿ ಪ್ರಕರಣವನ್ನು ಸೂಲಿಬೆಲೆ ಪೊಲೀಸರು ಬಯಲಿಗೆಳೆದಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಹೊಸಕೋಟೆ ತಾಲೂಕಿನ ಸಿದ್ದೇನಹಳ್ಳಿ ಗ್ರಾಮದಲ್ಲಿ ಈ ಕೊಲೆ ಪ್ರಕರಣದ ರಹಸ್ಯ ಕೊನೆಗೂ ಬೆಳಕಿಗೆ ಬಂದಿದ್ದು, ಪತ್ನಿ ಪುಷ್ಪಾ ಹಾಗೂ ಆಕೆಯ ಪ್ರಿಯಕರ ದೇವರಾಜ್‌ರನ್ನು ಪೊಲೀಸರು ಬಂಧಿಸಿದ್ದಾರೆ. ಪ್ರಿಯಕರನೊಂದಿಗೆ ಹೊಸ ಜೀವನ ಕಟ್ಟಿಕೊಳ್ಳುವ ಉದ್ದೇಶದಿಂದ ಪುಷ್ಪಾ ತನ್ನ ಪತಿ ಅಶೋಕ್ (40)ನನ್ನು ಸಂಚು ರೂಪಿಸಿ ಕೊಲೆ ಮಾಡಿದ್ದಾಳೆ ಎಂಬುದು ತನಿಖೆಯಿಂದ ಬಹಿರಂಗವಾಗಿದೆ.

ಅಶೋಕ್‌ನ ಮೃತದೇಹವು ಗ್ರಾಮದ ಸಮೀಪದ ರಸ್ತೆಯ ತಿರುವಿನಲ್ಲಿ ಪತ್ತೆಯಾಗಿತ್ತು. ಆರಂಭದಲ್ಲಿ ಇದೊಂದು ರಸ್ತೆ ಅಪಘಾತ ಎಂದು ಹೇಳಲಾಗಿತ್ತು. ಆದರೆ ಘಟನೆ ನಡೆದ ಸ್ಥಳ, ಶವದ ಸ್ಥಿತಿ ಹಾಗೂ ಕೆಲವು ಅನುಮಾನಾಸ್ಪದ ಅಂಶಗಳು ಗ್ರಾಮಸ್ಥರಲ್ಲಿ ಸಂಶಯ ಹುಟ್ಟಿಸಿತ್ತು. ಈ ಹಿನ್ನೆಲೆಯಲ್ಲಿ ಸ್ಥಳೀಯರು ಪೊಲೀಸರಿಗೆ ಮಾಹಿತಿ ನೀಡಿದ್ದು, ಸೂಲಿಬೆಲೆ ಪೊಲೀಸರು ಪ್ರಕರಣದ ಬಗ್ಗೆ ಆಳವಾದ ತನಿಖೆ ಆರಂಭಿಸಿದ್ದರು.

ಪೊಲೀಸರು ನಡೆಸಿದ ತನಿಖೆಯಲ್ಲಿ ಇದು ಅಪಘಾತವಲ್ಲ, ಪೂರ್ವಯೋಜಿತವಾಗಿ ರೂಪಿಸಲಾದ ಕೊಲೆ ಎಂಬುದು ಸ್ಪಷ್ಟವಾಗಿದೆ. ಮೃತನ ಪತ್ನಿ ಪುಷ್ಪಾ ತನ್ನ ಪ್ರಿಯಕರ ದೇವರಾಜ್ ಹಾಗೂ ಆತನ ಸಹಚರರಾದ ಮುನಿಂದ್ರ ಮತ್ತು ಸಿದ್ದಪ್ಪ ಅವರೊಂದಿಗೆ ಸೇರಿ ಸಂಚು ರೂಪಿಸಿದ್ದಾಳೆ ಎಂದು ಪೊಲೀಸರು ತಿಳಿಸಿದ್ದಾರೆ.

ಪೊಲೀಸ್ ಮಾಹಿತಿ ಪ್ರಕಾರ, ಎಣ್ಣೆ ಪಾರ್ಟಿ ಮಾಡುವ ನೆಪದಲ್ಲಿ ಅಶೋಕ್‌ರನ್ನು ಮನೆ ಹೊರಗೆ ಕರೆದುಕೊಂಡು ಹೋಗಲಾಗಿದೆ. ನಂತರ ಕೆರೆಯ ಬಳಿ ಕರೆದೊಯ್ದು, ಕಬ್ಬಿಣದ ರಾಡ್ ಬಳಸಿ ಅಶೋಕ್‌ನ ಮೇಲೆ ಹಲ್ಲೆ ನಡೆಸಿ ಹತ್ಯೆ ಮಾಡಲಾಗಿದೆ. ಕೊಲೆ ಮಾಡಿದ ಬಳಿಕ ಶವವನ್ನು ಗ್ರಾಮದ ಸಮೀಪದ ರಸ್ತೆಯ ತಿರುವಿನಲ್ಲಿ ಬಿಸಾಡಿ, ಅಪಘಾತ ನಡೆದಂತೆ ತೋರಿಸಲು ಯತ್ನಿಸಲಾಗಿದೆ ಎಂದು ತನಿಖೆಯಲ್ಲಿ ತಿಳಿದುಬಂದಿದೆ.

ಪತಿಯ ಸಾವಿನ ಬಳಿಕ ಪುಷ್ಪಾ ಹಾಗೂ ಆಕೆಯ ಪ್ರಿಯಕರ ದೇವರಾಜ್ ಅನುಮಾನ ತಪ್ಪಿಸಲು ಹೈಡ್ರಾಮಾ ನಡೆಸಿದ್ದು, ಘಟನೆ ಅಪಘಾತವೇ ಎಂಬಂತೆ ತೋರಿಸಲು ಪ್ರಯತ್ನಿಸಿದ್ದರು ಎನ್ನಲಾಗಿದೆ. ಆದರೆ ಗ್ರಾಮಸ್ಥರ ಶಂಕೆ ಹಾಗೂ ಪೊಲೀಸರ ಸುದೀರ್ಘ ವಿಚಾರಣೆಯಿಂದ ಆರೋಪಿಗಳ ನಿಜ ಮುಖ ಬಹಿರಂಗವಾಗಿದೆ.

ಸದ್ಯ ಸೂಲಿಬೆಲೆ ಪೊಲೀಸರು ಪ್ರಕರಣ ದಾಖಲಿಸಿಕೊಂಡು ಪುಷ್ಪಾ ಸೇರಿದಂತೆ ನಾಲ್ವರನ್ನು ಬಂಧಿಸಿದ್ದಾರೆ. ಆರೋಪಿಗಳಿಂದ ಹೆಚ್ಚಿನ ಮಾಹಿತಿ ಸಂಗ್ರಹಿಸುವ ಸಲುವಾಗಿ ವಿಚಾರಣೆ ಮುಂದುವರಿದಿದ್ದು, ಈ ಕೊಲೆ ಹಿಂದೆ ಇನ್ನೂ ಹೆಚ್ಚಿನ ಕಾರಣಗಳು ಅಥವಾ ಸಹಾಯಕರ ಪಾತ್ರವಿದೆಯೇ ಎಂಬ ದಿಕ್ಕಿನಲ್ಲಿ ಪೊಲೀಸರು ಪರಿಶೀಲನೆ ನಡೆಸುತ್ತಿದ್ದಾರೆ.

ಈ ಘಟನೆ ಪ್ರಿಯ ಸಂಬಂಧಗಳ ಹೆಸರಿನಲ್ಲಿ ನಡೆದ ಭೀಕರ ಅಪರಾಧವಾಗಿ ಗ್ರಾಮಸ್ಥರನ್ನು ಬೆಚ್ಚಿಬೀಳುವಂತೆ ಮಾಡಿದ್ದು, ಪ್ರದೇಶದಲ್ಲಿ ಚರ್ಚೆಗೆ ಕಾರಣವಾಗಿದೆ.

## ಶ್ರೀ ಕ್ಷೇತ್ರ ಧರ್ಮಸ್ಥಳದಿಂದ ನಿರ್ಗತಿಕರಿಗೆ ನೆರವಿನ ಹಸ್ತ



**ಕೃಷ್ಣರಾಜಪೇಟೆ:** ಶ್ರೀ ಕ್ಷೇತ್ರ ಧರ್ಮಸ್ಥಳದ ವತಿಯಿಂದ ಹಮ್ಮಿಕೊಳ್ಳಲಾಗುವ ವಾತ್ಸಲ್ಯ ಯೋಜನೆಯಡಿ ದೊಡ್ಡನಕಟ್ಟೆ ಗ್ರಾಮದ ನಿರ್ಗತಿಕ ವೃದ್ಧೆ ಕಾಳಮ್ಮನವರಿಗೆ ಅಗತ್ಯ ವಸ್ತುಗಳ ಕಿಟ್ ಹಾಗೂ ಮಾಸಾಶನವನ್ನು ವಿತ–ರಿಸಲಾಯಿತು.

ಧರ್ಮಸ್ಥಳದ ಧರ್ಮಾಧಿಕಾರಿಗಳಾದ ಡಾ. ಡಿ. ವೀರೇಂದ್ರ ಹೆಗ್ಗಡೆಯವರು ಹಾಗೂ ಮಾತೃಶ್ರೀ ಹೇಮಾವತಿ ಹೆಗ್ಗಡೆಯವರ ಮಾರ್ಗದರ್ಶನದಲ್ಲಿ ಈ ಕಾರ್ಯಕ್ರಮ ನಡೆಯಿತು,

ದೊಡ್ಡನಕಟ್ಟೆ ಗ್ರಾಮದ ಕಾಳಮ್ಮ ನವರು ಯಾರ ಆಸರೆಯೂ ಇಲ್ಲದೆ ಸಂಕಷ್ಟದಲ್ಲಿದ್ದನ್ನು ಗಮನಿಸಿದ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನ ಸಂಸ್ಥೆ ಅವರಿಗೆ ನೆರವಾಗಲು ಮುಂದಾಗಿದ್ದಾರೆ,

ಕಾಳಮ್ಮನವರಿಗೆ ಪ್ರತಿ ತಿಂಗಳು 1,000 ರೂ.ಗಳ ಮಾಸಾಶನ ನೀಡಲಾಗುತ್ತಿದ್ದು, ಇದರೊಂದಿಗೆ ಪೌಷ್ಟಿಕ ಆಹಾರದ ವಾತ್ಸಲ್ಯ ಮಿಕ್ಸ್ ಕಿಟ್ ಹಾಗೂ ಬಟ್ಟೆಬರೆಗಳನ್ನು ಹಸ್ತಾಂತರಿಸಲಾಯಿತು,

ಕಿಕ್ಕೇರಿ ಯೋಜನಾ ಕಚೇರಿ ವ್ಯಾಪ್ತಿಯಲ್ಲಿ ಇಂತಹ ಸುಮಾರು 14 ಕುಟುಂಬಗಳನ್ನು ಗುರುತಿಸಲಾಗಿದ್ದು, ಎಲ್ಲರಿಗೂ ಹಂತ ಹಂತವಾಗಿ ನೆರವು ನೀಡಲಾಗುತ್ತಿದೆ, ರಾಜ್ಯಾದ್ಯಂತ ಸುಮಾರು 22,000 ನಿರ್ಗತಿಕರಿಗೆ ಪ್ರತಿ ತಿಂಗಳು ಮಾಸಾಶನ ವಿತರಿಸಲಾಗುತ್ತಿದೆ. ವಾಸಕ್ಕೆ ಮನೆಯಿಲ್ಲದವರಿಗೆ ವಾತ್ಸಲ್ಯ ಯೋಜನೆಯಡಿ ಹೊಸದಾಗಿ ಮನೆ ನಿರ್ಮಿಸಿಕೊಡುವ ಅಥವಾ ರಿಪೇರಿ ಮಾಡಿಕೊಡುವ ಕಾರ್ಯವನ್ನೂ ಶ್ರೀ ಕ್ಷೇತ್ರವು ಮಾಡುತ್ತಿದೆ, ಎಂದು ಕಿಕ್ಕೇರಿ ತಾಲ್ಲೂಕು ಯೋಜನಧಿಕಾರಿ ಪ್ರಸಾದ್ ರವರು ತಿಳಿಸಿದರು,

ಸಂದರ್ಭ ತಾಲೂಕು ಯೋಜನಾಧಿಕಾರಿ ಪ್ರಸಾದ್ ರವರು ವಲಯದ ಮೇಲ್ವಿಚಾರಕರು ಗುಣಶ್ರೀ, ಗ್ರಾ ಪಂ ಅಧ್ಯಕ್ಷ ಕುಮಾರ್, ಗ್ರಾ ಪಂ. ಸದಸ್ಯ ಡಿ.ಸಿ. ನಾರಾಯಣ, ಗ್ರಾಮದ ಮುಖಂಡರಾದ ಗಿರಿಧರ್, ನಾಗೇಶ್, ಸೇವಾ ಪ್ರತಿನಿಧಿ ಜೀವಿತ. ಕಾವ್ಯ ಸೇ–ರಿದಂತೆ ಮತ್ತಿತರರು ಉಪಸ್ಥಿತರಿದ್ದರು.

## ಹೆಂಡತಿ–ಮಕ್ಕಳಿದ್ದೂ ಅನಾಥನಾದ ವೃದ್ಧ ಆಸ್ತಿಗಾಗಿ ಅಪ್ಪನನ್ನೇ ಕೈಬಿಟ್ಟ ಕುಟುಂಬ



**ಕೃಷ್ಣರಾಜಪೇಟೆ:** ಮನುಷ್ಯ ನಿಗೆ ಆಸ್ತಿ–ಅಂತಸ್ತು ಮುಖ್ಯವೋ? ಅಥವಾ ಹೆತ್ತ ತಂದೆ–ತಾಯಿಯೋ? ಇಂದಿನ ಸ್ವಾರ್ಥಿ ಜಗತ್ತಿನಲ್ಲಿ ರಕ್ತ ಸಂಬಂಧಗಳಿಗಿಂತ ಹಣಕ್ಕೇ ಬೆಲೆ ಎಂಬುದು ಮತ್ತೊಮ್ಮೆ ಸಾಬೀತಾಗಿದೆ.

ಮಂಡ್ಯ ಜಿಲ್ಲೆಯ ಕೃಷ್ಣರಾಜಪೇಟೆ ತಾಲ್ಲೂಕಿನ ಶೀಳನೇರೆ ಹೋಬಳಿಯ ಊಚನಹಳ್ಳಿ ಗ್ರಾಮದ ಚಿಕ್ಕಯ್ಯ ಎಂಬುವವರ ಕಥೆಯೇ ಇದಕ್ಕೆ ಸಾಕ್ಷಿ,

ದುಡಿಮೆಯಿದ್ದಾಗ ಅಪ್ಪ ಬೇಕು, ವಯಸ್ಸಾದಾಗ ಬೇಡ, ಚಿಕ್ಕಯ್ಯ ಅವರು ಕೈಕಾಲು ಆಡುತ್ತಿದ್ದಾಗ ದುಡಿದು ಕುಟುಂಬವನ್ನು ಸಲಹುತ್ತಿದ್ದಾಗ ಹೆಂಡತಿ ಮಕ್ಕಳಿಗೆ ಅಪ್ಪ ಅಚ್ಚುಮೆಚ್ಚಿನವರಾಗಿದ್ದರು.

ಆದರೆ ಈಗ ವಯಸ್ಸಾಗಿ ಶಕ್ತಿ ಕುಂದಿದಾಗ ಅದೇ ಕುಟುಂಬದ ಪಾಲಿಗೆ ಇವರು ಬೇಡವಾದ ವಸ್ತುವಾಗಿದ್ದಾರೆ,

ಕಣ್ಣ ಮುಂದೆಯೇ ಹೆಂಡತಿ ಮಕ್ಕಳಿದ್ದರೂ ಸಹ ಇಂದು ಅವರು ಅನಾಥರಂತೆ ಬೀದಿಗೆ ಬಿದ್ದಿರುವುದು ವಿಷಾದನೀಯ,

ಕುಟುಂಬದವರಿಗೆ ಚಿಕ್ಕಯ್ಯ ಅವರ ಹೆಸರಿನಲ್ಲಿರುವ ಆಸ್ತಿ ಬೇಕು, ಅವರು ಕಟ್ಟಿಸಿದ ಮನೆ ಬೇಕು. ಆದರೆ ಆ ಮನೆಯ ಯಜಮಾನ ಮಾತ್ರ ಬೇಡವಾಗಿದ್ದಾನೆ.

ಆಸ್ತಿಯನ್ನು ತಮ್ಮ ಹೆಸರಿಗೆ ಮಾಡಿಸಿಕೊಳ್ಳುವ ಆತುರದಲ್ಲಿರುವ ಕುಟುಂಬಸ್ಥರು, ತಂದೆಯನ್ನು ಕನಿಷ್ಠ ಮನುಷ್ಯನಂತೆ ಕಾಣುವ ಸೌಜನ್ಯವನ್ನೂ ಮರೆತಿದ್ದಾರೆ,



ಅನಾಥರ ಪಾಲಿನ ಆಶಾಕಿರಣವಾಗಿರುವ ಮಾತೃಭೂಮಿ ವೃದ್ಧಾಶ್ರಮದ ಜೈ ಹಿಂದ್ ನಾಗಣ್ಣ ರವರು ಈ ವೃದ್ಧನ ನೆರವಿಗೆ ಧಾವಿಸಿದ್ದಾರೆ.

ಕುಟುಂಬದವರಿಂದ ತಿರಸ್ಕರಿಸಲ್ಪಟ್ಟ ಚಿಕ್ಕಯ್ಯ ಅವರಿಗೆ ವೃದ್ಧಾಶ್ರಮದಲ್ಲಿ ಆಶ್ರಯ ನೀಡಿ, ಮಾನವೀಯತೆ ಮೆರೆದಿದ್ದಾರೆ.

ನಾಗಣ್ಣ ರವರ ಈ ನಿಸ್ವಾರ್ಥ ಸೇವೆಗೆ ಸಾರ್ವಜನಿಕ ವಲಯದಲ್ಲಿ ಭಾರಿ ಶ್ಲಾಘನೆ ವ್ಯಕ್ತವಾಗುತ್ತಿದೆ,

ಹೆತ್ತವರನ್ನು ಬೀದಿಗೆ ತಳ್ಳುವ ಇಂತಹ ಘಟನೆಗಳು ಸಮಾಜಕ್ಕೆ ಕಳಂಕ ಆಸ್ತಿಗಾಗಿ ಹೆತ್ತವರನ್ನು ಅನಾಥರನ್ನಾಗಿ ಮಾಡುವ ಮಕ್ಕಳಿಗೆ ಮುಂದಿನ ದಿನಗಳಲ್ಲಿ ಕಾಲವೇ ತಕ್ಕ ಪಾಠ ಕಲಿಸಲಿದೆ ಎಂಬುದನ್ನು ಮರೆಯಬಾರದು.

## ಫೆಬ್ರವರಿ 10ರಂದ ವಿಶೇಷ ಚೇತನರ ಕ್ಷೇಮಾಭಿವೃದ್ಧಿ ಸಂಘ ಉದ್ಘಾಟನೆ



**ಕೃಷ್ಣರಾಜಪೇಟೆ:** ತಾಲೂಕು ಮಟ್ಟದಲ್ಲಿ ನೂತನವಾಗಿ ಮೈಸೂರು –ಚನ್ನರಾಯ ಪಟ್ಟಣ ಮುಖ್ಯ ರಸ್ತೆಯ ಅಂಚೆ ಕಛೇರಿ ಹತ್ತಿರದಲ್ಲಿರುವ ವಿಶೇಷ ಚೇತನರ ಕ್ಷೇಮಾಭಿವೃದ್ಧಿ ಸಂಘದ ಅಧಿಕೃತ ಕಛೇರಿಯ ಉದ್ಘಾಟನಾ ಸಮಾರಂಭವು ಫೆಬ್ರವರಿ 10ರಂದು ನಡೆಯಲಿದೆ ಎಂದು ತಾಲೂಕು ಅಧ್ಯಕ್ಷ ಸೋಮು.ಎಂ. ರವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದರು,

ಪಟ್ಟಣದ ಪ್ರವಾಸಿ ಮಂದಿ ರದಲ್ಲಿ ಆಹ್ವಾನ ಪತ್ರಿಕೆ ಬಿಡುಗಡೆಗೊಳಿಸಿ ಮಾತನಾಡಿದ ಅವರು ತಾಲೂಕಿನ ವಿಶೇಷ ಚೇತನರ ಹಿತರಕ್ಷಣೆ ಮತ್ತು ಅಭಿವೃದ್ಧಿಗಾಗಿ ಈ ಸಂಘವನ್ನು ರಚಿಸಲಾಗಿದ್ದು, ಫೆಬ್ರವರಿ 10/2026ರ ಮಂಗಳವಾರದಂದು ಬೆಳಗ್ಗೆ 10:30ಕ್ಕೆ ಕ್ಷೇತ್ರದ ಶಾಸಕರಾದ ಹೆಚ್.ಟಿ. ಮಂಜು ರವರು ಕಚೇರಿಯನ್ನು ಉದ್ಘಾಟನೆ ಮಾಡಲಿದ್ದಾರೆ, ಸಂಘದ ಅಧಿಕೃತ ನೋಂದಣಿ ಕಾರ್ಯ ಪೂರ್ಣಗೊಂಡಿದ್ದು, ಮುಂಬರುವ ದಿನಗಳಲ್ಲಿ ವಿಶೇಷ ಚೇತನರಿಗೆ ಸಿಗಬೇಕಾದ ಸರ್ಕಾರಿ ಸೌಲಭ್ಯಗಳು ಹಾಗೂ ಸಂಘದ ಬಲವರ್ಧನೆಗೆ ಎಲ್ಲರೂ ಕೈಜೋಡಿಸ ಬೇಕೆಂದು ಮನವಿ ಮಾಡಿದರು,

ಇದೆ ಸಂದರ್ಭದಲ್ಲಿ ವಿಶೇಷ ಚೇತನರ ಕ್ಷೇಮಾಭಿವೃದ್ಧಿ ಸಂಘದ ತಾಲೂಕು ಅಧ್ಯಕ್ಷರಾದ ಸೋಮು.ಎಂ,ತಾಲೂಕಿನ ವಿಕಲ ಚೇತನರ ಸಂಯೋ ಜಕರಾದ ಬಸವರಾಜು, ಅಭಿಲಾಷ್, ಜವರೇಗೌಡ .ಎ.ಭವ ್ಯ.ಸಿ.ಎನ್, ಗಂಗಾ ಧರ್, ಗ್ರಾಮೀಣ ಪುನ ರ್ವಸತಿ ಕಾರ್ಯ ಕರ್ತರಾದ ಸಿ.ಪಿ. ರಘು,ಕುಮಾರ್ ವಿಠಲ ಾಪುರ, ಹಾಗೂ ಸಂಘದ ನಿರ್ದೇಶಕರು, ಪದಾಧಿಕಾರಿಗಳು ಸೇ–ರಿದಂತೆ ಹಲವರು ಉಪಸ್ಥಿತರಿದ್ದರು,

## ಕಾರ್ ಸರ್ವಿಸ್ ಸೆಂಟರ್‌ನಲ್ಲಿ ಭೀಕರ ಅಗ್ನಿ ಅವಘಡ

**ವಿಜಯಪುರ:** ಜಿಲ್ಲೆಯ ರಾಷ್ಟ್ರೀಯ ಹೆದ್ದಾರಿ ಸಮೀಪದಲ್ಲಿರುವ ಖಾಸಗಿ ಕಾರ್ ಸರ್ವಿಸ್ ಸೆಂಟರ್‌ನಲ್ಲಿ ಭಾರೀ ಅಗ್ನಿ ಅವಘಡ ಸಂಭವಿಸಿ, ಕೋಟ್ಯಂತರ ರೂಪಾಯಿ ಮೌಲ್ಯದ ಆಸ್ತಿ ನಾಶವಾದ ಘಟನೆ ವರದಿಯಾಗಿದೆ. ನಗರದ ಹೊರವಲಯ ದಲ್ಲಿರುವ ಹೆಚ್‌ಎಂಕೆ ಕಾರ್ ಸರ್ವಿಸ್ ಸೆಂಟ–ರ್‌ನಲ್ಲಿ ಆಕಸ್ಮಿಕವಾಗಿ ಬೆಂಕಿ ಕಾಣಿಸಿಕೊಂಡಿದ್ದು, ಕೆಲವೇ ಕ್ಷಣಗಳಲ್ಲಿ ಇಡೀ ಕಟ್ಟಡವನ್ನು ಆವರಿಸಿಕೊಂಡಿದೆ.

ಪ್ರಾಥಮಿಕ ಮಾಹಿತಿಯಂತೆ, ಬೆಂಕಿ ಅತಿ ವೇಗವಾಗಿ ವ್ಯಾಪಿಸಿದ್ದು, ಸರ್ವಿಸ್ ಸೆಂಟರ್‌ನೊಳಗೆ ನಿಲ್ಲಿಸಲಾಗಿದ್ದ ಕನಿಷ್ಠ 20ಕ್ಕೂ ಹೆಚ್ಚು ಕಾರುಗಳು ಸಂಪೂರ್ಣವಾಗಿ ಸುಟ್ಟು ಭಸ್ಮವಾಗಿವೆ. ಇದರಿಂದ ಸುಮಾರು ಒಂದು ಕೋಟಿ ರೂಪಾಯಿಗೂ ಅಧಿಕ ಮೌಲ್ಯದ ವಾಹನಗಳು ನಾಶವಾಗಿವೆ ಎಂದು ಅಂದಾಜಿಸಲಾಗಿದೆ. ಇದಲ್ಲದೆ, ಸರ್ವಿಸ್ ಸೆಂಟರ್‌ನಲ್ಲಿ ಸಂಗ್ರಹಿಸಿಟ್ಟಿದ್ದ



ಸುಮಾರು 35 ಲಕ್ಷ ರೂಪಾಯಿ ಮೌಲ್ಯದ ಬಿಡಿಭಾಗಗಳು, ಯಂತ್ರೋಪ ಕರಣಗಳು ಹಾಗೂ ಇತರೆ ಅಗತ್ಯ ಸಾಮಗ್ರಿಗಳು ಕೂಡ ಬೆಂಕಿಗಾಹುತಿಯಾಗಿವೆ.

ಘಟನೆಯ ಸಮಯದಲ್ಲಿ ಸರ್ವಿಸ್ ಸೆಂಟರ್‌ನಲ್ಲಿ ಗ್ರಾಹಕರ ಹಲವು ವಾಹನಗಳನ್ನು ದುರಸ್ತಿ ಹಾಗೂ ಸರ್ವೀಸಿಂಗ್‌ಗಾಗಿ ನಿಲ್ಲಿಸಲಾಗಿತ್ತು. ಆದರೆ ಅಕಸ್ಮಿಕವಾಗಿ ಕಾಣಿಸಿಕೊಂಡ ಬೆಂಕಿ ಕ್ಷಣಕ್ಷಣಕ್ಕೂ ವ್ಯಾಪಿಸುತ್ತಾ ಹೋಗಿ, ಇಡೀ ಶೆಡ್ ಅನ್ನು ಆವರಿಸಿಕೊಂಡಿದ್ದ–ರಿಂದ ವಾಹನಗಳನ್ನು ಹೊರತೆಗೆದರೆ ಸಾಧ್ಯವಾಗಿಲ್ಲ. ಬೆಂಕಿಯ ತೀವ್ರತೆಗೆ ಶೆಡ್‌ನ ಮೇಲ್ಛಾವಣಿ ಹಾಗೂ ಒಳಾಂಗಣ ಸಂಪೂರ್ಣ ವಾಗಿ ಹಾನಿಗೊಂಡಿವೆ.

ಸ್ಥಳೀಯರು ಬೆಂಕಿ ಕಾಣುತ್ತಿದ್ದಂತೆಯೇ ತಕ್ಷಣ ಅಗ್ನಿಶಾಮಕ ದಳಕ್ಕೆ ಮಾಹಿತಿ ನೀಡಿದ್ದಾರೆ. ಸುದ್ದಿ ತಿಳಿಯುತ್ತಿದ್ದಂತೆಯೇ ವಿಜಯಪುರ ಅಗ್ನಿಶಾಮಕ ದಳದ ಸಿಬ್ಬಂದಿ ಹಲವು ವಾಹನಗಳೊಂದಿಗೆ ಸ್ಥಳಕ್ಕೆ ಧಾವಿಸಿ, ಸತತ ಕಾರ್ಯಾಚರಣೆ ನಡೆಸಿದ್ದಾರೆ. ಬೆಂಕಿಯ ತೀವ್ರತೆಯಿಂದ ಕಾರ್ಯಾಚರಣೆ ಕಷ್ಟಕರವಾಗಿದ್ದರೂ, ಗಂಟೆಗಳ ಕಾಲ ಶ್ರಮಿಸಿದ ನಂತರ ಅಗ್ನಿಯನ್ನು ಸಂಪೂರ್ಣವಾಗಿ ನಿಯಂತ್ರಣಕ್ಕೆ ತರಲು ಸಾಧ್ಯವಾಯಿತು.

ಘಟನೆಯ ವೇಳೆ ಸರ್ವಿಸ್ ಸೆಂಟರ್ ಒಳಗೆ ಯಾರೂ ಇಲ್ಲದ ಕಾರಣ ಯಾವುದೇ ಪ್ರಾಣಾಪಾಯ ಸಂಭವಿಸಿಲ್ಲ. ಆದರೆ ಆಸ್ತಿ ನಷ್ಟದ ಪ್ರಮಾಣ ಮಾತ್ರ ಭಾರೀ ಆಗಿದೆ. ಬೆಂಕಿ ಅವಘಡದ ನಿಖರ ಕಾರಣ ಇನ್ನೂ ತಿಳಿದುಬಂದಿಲ್ಲ. ವಿದ್ಯುತ್ ಶಾರ್ಟ್ ಸರ್ಕ್ಯೂಟ್ ಅಥವಾ ಇತರೆ ತಾಂತ್ರಿಕ ದೋಷದಿಂದ ಬೆಂಕಿ ಕಾಣಿಸಿಕೊಂಡಿರಬಹುದೆಂಬ ಶಂಕೆ ವ್ಯಕ್ತವಾಗಿದ್ದು, ಈ ಕುರಿತು ಸಂಬಂಧಪಟ್ಟ ಅಧಿಕಾರಿಗಳು ಪರಿಶೀಲನೆ ನಡೆಸುತ್ತಿದ್ದಾರೆ.

ಈ ಘಟನೆ ಸ್ಥಳೀಯ ವ್ಯಾಪಾರ ವಲಯದಲ್ಲಿ ಆತಂಕ ಮೂಡಿಸಿದ್ದು, ಅಗ್ನಿ ಸುರಕ್ಷತಾ ಕ್ರಮಗಳನ್ನು ಇನ್ನಷ್ಟು ಬಲಪಡಿಸುವ ಅಗತ್ಯವಿದೆ ಎಂಬ ಚರ್ಚೆಗೆ ಕಾರಣವಾಗಿದೆ.

**ಪೊಲೀಸರ ಪರಿಶೀಲನೆ, ಪ್ರಕರಣ ದಾಖಲು:** ಮಾಹಿತಿ ದೊರೆಯುತ್ತಿದ್ದಂತೆಯೇ ಗೋಲ ಗುಂಬಜ್ ಠಾಣೆ ಮತ್ತು ವಿಜಯಪುರ ಗ್ರಾಮೀಣ ಠಾಣೆಯ ಪೊಲೀಸರು ಘಟನಾ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಸರ್ವಿಸ್ ಸೆಂಟರ್ ಮಾಲೀಕ ಹನಮಂತ ಕನಮಡಿ ಅವರಿಂದ ಮಾಹಿತಿ ಪಡೆದು, ಪ್ರಕರಣ ದಾಖಲಿಸಿಕೊಂಡಿದ್ದಾರೆ.

## ಮಾತು ಬಿಟ್ಟಿದ್ದಕ್ಕೆ ಪ್ರಿಯಕರನನ್ನೇ ಕೊಂದ ಯುವತಿ!

**ಬಿಲಾಸ್ಪುರ:** ಹಲವು ವರ್ಷ ಗಳಿಂದ ಪರಸ್ಪರ ಪ್ರೀತಿಸುತ್ತಿದ್ದ ಜೋಡಿಯ ನಡುವೆ ಉಂಟಾದ ಮನಸ್ತಾಪ ಕೊನೆಗೆ ಭೀಕರ ಹತ್ಯೆಗೆ ಕಾರಣವಾದ ಘಟನೆ ಛತ್ತೀಸ್‌ಗಢದ ಬಿಲಾಸ್ಪುರ ನಗರದಲ್ಲಿ ನಡೆದಿದೆ. ಪ್ರೇಯಸಿ ಜೊತೆ ಮಾತನಾಡುವುದನ್ನು ಯುವಕ ಏಕಾಏಕಿ ನಿಲ್ಲಿಸಿದ್ದಕ್ಕೆ ಕೋಪಗೊಂಡ 22 ವರ್ಷದ ಯುವತಿ, ತನ್ನ ಪ್ರಿಯಕರನನ್ನೇ ಚಾಕುವಿನಿಂದ ಇರಿದು ಕೊಲೆ ಮಾಡಿದ್ದಾಳೆ ಎಂಬುದು ತನಿಖೆಯಿಂದ ಬಹಿರಂಗವಾಗಿದೆ.

ಮಂಗಳವಾರ ಬೆಳಿಗ್ಗೆ ಈ ಘಟನೆ ನಡೆದಿದ್ದು, 25 ವರ್ಷದ ಪ್ರಸಾದ್ ಸೂರ್ಯವಂಶಿ ಬಾಡಿಗೆ ಮನೆಯಲ್ಲಿ ಕೊಲೆಯಾಗಿದ್ದಾನೆ. ಆರೋಪಿ ಯುವತಿಯನ್ನು ಜಿಲ್ಲೆಯ ಸಿಪತ್ ಪ್ರದೇಶದ ಝುಲ್ಮಲಾ ಗ್ರಾಮದ ನಿವಾಸಿ ರೋಶ್ನಿ ಸೂರ್ಯವಂಶಿ ಎಂದು ಗುರುತಿಸಲಾಗಿದೆ. ಘಟನೆ ಬಳಿಕ ಸ್ಥಳಕ್ಕೆ ಧಾವಿಸಿದ ಪೊಲೀಸರು, ಆರೋಪಿಯನ್ನು ಬಂಧಿಸಿ ವಿಚಾರಣೆ ನಡೆಸಿದ್ದಾರೆ.

ಪೊಲೀಸ್ ತನಿಖೆಯ ಪ್ರಕಾರ, ರತನ್‌ಪುರ ಪ್ರದೇಶದ ಕರ್ರಾ ಗ್ರಾಮದ ನಿವಾಸಿಯಾದ ಪ್ರಸಾದ್, ಬಿಲಾಸ್ಪುರ ನಗರದ ಮಂಗ್ಲಾ ಚೌಕ್ ಸಮೀಪದ ರೆಸ್ಟೋರೆಂಟ್‌ನಲ್ಲಿ ವೇಟರ್ ಆಗಿ ಕೆಲಸ ಮಾಡುತ್ತಿದ್ದ. ಆತ ಶುಭಂ ವಿಹಾರ್ ಪ್ರದೇಶದಲ್ಲಿರುವ ಬಾಡಿಗೆ ಮನೆಯಲ್ಲಿ ಇನ್ನಿಬ್ಬರು ರೂಮ್‌ಮೇಟ್‌ಗಳೊಂದಿಗೆ ವಾಸವಿದ್ದನು.

ಕೆಲವು ಸಮಯದ ಹಿಂದೆ, ಅದೇ ರೆಸ್ಟೋರೆಂಟ್‌ನಲ್ಲಿ ಕೆಲಸ ಮಾಡುತ್ತಿದ್ದ ರೋಶ್ನಿಯೊಂದಿಗೆ ಪ್ರಸಾದ್‌ಗೆ ಇನ್‌ಸ್ಟಾಗ್ರಾಮ್ ಮೂಲಕ ಪರಿಚಯವಾಗಿತ್ತು. ಪರಿಚಯ ಸ್ನೇಹವಾಗಿ, ನಂತರ ಪ್ರೀತಿಯಾಗಿ ಮಾರ್ಪಟ್ಟಿತ್ತು. ಇಬ್ಬರೂ ಆಗಾಗ ಭೇಟಿಯಾಗುತ್ತಿದ್ದರು ಹಾಗೂ ಹಲವು ವರ್ಷಗಳಿಂದ ಪರಸ್ಪರ ಸಂಪರ್ಕದಲ್ಲಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಆದರೆ ಇತ್ತೀಚಿನ ದಿನಗಳಲ್ಲಿ ಪ್ರಸಾದ್ ಅಕಸ್ಮಿಕವಾಗಿ ರೋಶ್ನಿಯ ಮೊಬೈಲ್ ನಂಬರ್ ಅನ್ನು ಬ್ಲಾಕ್ ಮಾಡಿದ್ದಾನೆ. ಆಕೆ ಬೇರೆ ಬೇರೆ ನಂಬರ್‌ಗಳಿಂದ ಸಂಪರ್ಕಿಸಲು ಪ್ರಯತ್ನಿಸಿದರೂ ಆತ ಸರಿಯಾಗಿ ಪ್ರತಿಕ್ರಿಯಿಸುತ್ತಿರಲಿಲ್ಲ. ಇನ್‌ಸ್ಟಾಗ್ರಾಮ್‌ನಲ್ಲಿ ಕಳುಹಿಸಿದ ಸಂದೇಶಗಳಿಗೂ ಉತ್ತರ ನೀಡದೇ ಇದ್ದುದರಿಂದ ರೋಶ್ನಿ ತೀವ್ರವಾಗಿ ಕೋಪಗೊಂಡಿದ್ದಾಳೆ ಎಂದು ತನಿಖೆಯಲ್ಲಿ ತಿಳಿದುಬಂದಿದೆ.

ಪ್ರಸಾದ್ ಮತ್ತೊಬ್ಬ ಮಹಿಳೆಯೊಂದಿಗೆ ಸಂಬಂಧ ಹೊಂದಿದ್ದಾನೆ ಎಂಬ ಶಂಕೆಯೂ ರೋಶ್ನಿಗೆ ಬಂದಿತ್ತು. ಇದರಿಂದ ಆಕ್ರೋಶಗೊಂಡ ಆಕೆ ಮಂಗಳವಾರ ಬೆಳಿಗ್ಗೆ ಸುಮಾರು 11 ಗಂಟೆ ವೇಳೆಗೆ ಪ್ರಸಾದ್ ವಾಸವಾಗಿದ್ದ ಬಾಡಿಗೆ ಮನೆಗೆ ತೆರಳಿದ್ದಾಳೆ. "ನನ್ನ ನಂಬರ್ ಯಾಕೆ ಬ್ಲಾಕ್ ಮಾಡಿದ್ದೀಯ?" ಎಂದು ಪ್ರಶ್ನಿಸಿದಾಗ ಇಬ್ಬರ ನಡುವೆ ಮಾತಿನ ಚಕಮಕಿ ನಡೆದಿದ್ದು, ಅದು ಕ್ಷಣಾರ್ಧದಲ್ಲಿ ಗಲಾಟೆಗೆ ತಿರುಗಿದೆ.

ಈ ವೇಳೆ ಆಕ್ರೋಶಕ್ಕೆ ಒಳಗಾದ ರೋಶ್ನಿ, ಮನೆಲ್ಲಿದ್ದ ತರಕಾರಿ ಕತ್ತರಿಸುವ ಚಾಕುವನ್ನು ತೆಗೆದುಕೊಂಡು ಪ್ರಸಾದ್‌ನ ಎದೆಗೆ ಇರಿದಿದ್ದಾಳೆ. ಗಾಯದ ತೀವ್ರತೆಗೆ ಪ್ರಸಾದ್ ಸ್ಥಳದಲ್ಲೇ ಕುಸಿದುಬಿದ್ದಿದ್ದಾನೆ. ಘಟನೆಯ ಸಮಯದಲ್ಲಿ ಮನೆಯಲ್ಲಿದ್ದ ರೂಮ್‌ಮೇಟ್‌ಗಳು ಕೂಡ ಅಲ್ಲಿಯೇ ಇದ್ದರು ಎಂದು ಪೊಲೀಸರು ತಿಳಿಸಿದ್ದಾರೆ.

ಗಾಯಗೊಂಡ ಪ್ರಸಾದ್‌ನನ್ನು ಆಸ್ಪತ್ರೆಗೆ ಸಾಗಿಸಲು ಯತ್ನಿಸಲಾದರೂ, ದಾಖಲಿಸುವ ಮೊದಲೇ ಆತ ಮೃತಪಟ್ಟಿದ್ದಾನೆ ಎಂದು ವೈದ್ಯರು ತಿಳಿಸಿದ್ದಾರೆ. ಘಟನೆಯ ಬಗ್ಗೆ ಮಾಹಿತಿ ಪಡೆದ ಪೊಲೀಸರು ಸ್ಥಳಕ್ಕೆ ಧಾವಿಸಿ, ಪ್ರತ್ಯಕ್ಷದರ್ಶಿಗಳ ಹೇಳಿಕೆ ಆಧರಿಸಿ ರೋಶ್ನಿಯನ್ನು ಬಂಧಿಸಿದ್ದಾರೆ.

## ಹಸೆಮಣೆ ಏರಬೇಕಿದ್ದ ಯುವತಿ ಅಪಘಾತಕ್ಕೆ ಬಲಿ



**ಮಂಗಳೂರು:** ಖಾಸಗಿ ಬಸ್ ಡಿಕ್ಕಿಯಾದ ಪರಿಣಾಮ ದ್ವಿಚಕ್ರ ವಾಹನದಲ್ಲಿ ಪ್ರಯಾಣಿಸುತ್ತಿದ್ದ ಯುವತಿ ಮೃತಪಟ್ಟಿರುವ ಹೃದಯವಿದ್ರಾವಕ ಘಟನೆ ಮಂಗಳೂರು ನಗರದ ನಂತೂರು ವೃತ್ತದ ಬಳಿ ನಡೆದಿದೆ. ಬಲ್ಲಾಲ್‌ಬಾಗ್ ನಿವಾಸಿ ದೀಪ್ತಿ (26) ಮೃತ ದುರ್ದೈವಿ ಎಂದು ಗುರುತಿಸಲಾಗಿದೆ. ಈ ದುರ್ಘಟನೆ ನಗರದಲ್ಲಿ ಭಾರೀ ಆಕ್ರೋಶಕ್ಕೆ ಕಾರಣವಾಗಿದೆ.

ಮೃತ ದೀಪ್ತಿಗೆ ಇತ್ತೀಚೆಗಷ್ಟೇ ವಿವಾಹ ನಿಶ್ಚಯವಾಗಿದ್ದು, ಸಂತಸದ ಜೀವನಕ್ಕೆ ಸಜ್ಜಾಗುತ್ತಿದ್ದ ಯುವತಿಯ ಜೀವ ಕ್ಷಣಾರ್ಧದಲ್ಲಿ ಕಸಿದುಕೊಂಡಿರುವುದು ಕುಟುಂಬಸ್ಥರನ್ನು ಆಘಾತಕ್ಕೆ ಒಳಪಡಿಸಿದೆ. ದೀಪ್ತಿ ತನ್ನ ಭಾವಿ ಪತಿಯೊಂದಿಗೆ ದ್ವಿಚಕ್ರ ವಾಹನದಲ್ಲಿ ವಾಮಂಜೂರಿಗೆ ತೆರಳುತ್ತಿದ್ದ ವೇಳೆ ಈ ಅಪಘಾತ ಸಂಭವಿಸಿದೆ. ಬರ್ತ್‌ಡೇ ಪಾರ್ಟಿಯಲ್ಲಿ ಭಾಗವಹಿಸುವ ಉದ್ದೇಶದಿಂದ ಇಬ್ಬರೂ ಹೊರಟಿದ್ದರು ಎನ್ನಲಾಗಿದೆ. ಅಪಘಾತದಲ್ಲಿ ದೀಪ್ತಿಯ ಭಾವಿ ಪತಿ ಅದೃಷ್ಟವಶಾತ್ ಪ್ರಾಣಾಪಾಯದಿಂದ ಪಾರಾಗಿದ್ದಾರೆ.

ಪೊಲೀಸ್ ಮೂಲಗಳ ಪ್ರಕಾರ, ಕುಡುಪು ಭಾಗದ ಕಡೆಗೆ ತೆರಳುತ್ತಿದ್ದ 22ನೇ ನಂಬರ್ ಖಾಸಗಿ ಬಸ್ ದ್ವಿಚಕ್ರ ವಾಹನಕ್ಕೆ ಡಿಕ್ಕಿ ಹೊಡೆದಿದೆ. ಡಿಕ್ಕಿಯ ತೀವ್ರತೆಗೆ ದ್ವಿಚಕ್ರ ವಾಹನ ಸವಾರರು ರಸ್ತೆಗೆ ಬಿದ್ದಿದ್ದು, ಈ ವೇಳೆ ದೀಪ್ತಿಯ ಹೊಟ್ಟೆ ಮೇಲೆ ಬಸ್ ಚಕ್ರ ಹರಿದಿದೆ. ಪರಿಣಾಮ ಆಕೆ ಗಂಭೀರವಾಗಿ ಗಾಯಗೊಂಡಿದ್ದರು. ತಕ್ಷಣವೇ ಸ್ಥಳೀಯರು ಹಾಗೂ ಸಾರ್ವಜನಿಕರು ಗಾಯಾಳುವನ್ನು ಆಸ್ಪತ್ರೆಗೆ ಸಾಗಿಸಲು ಯತ್ನಿಸಿದರೂ, ಮಾರ್ಗಮಧ್ಯೆಯೇ ದೀಪ್ತಿ ಮೃತಪಟ್ಟಿದ್ದಾರೆ ಎಂದು ತಿಳಿದುಬಂದಿದೆ.

ಘಟನೆ ತಿಳಿಯುತ್ತಿದ್ದಂತೆ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದರು. ಆದರೆ ಖಾಸಗಿ ಬಸ್‌ಗಳ ಅತಿವೇಗ ಮತ್ತು ಅಜಾಗರೂಕ ಚಾಲನೆಯ ವಿರುದ್ಧ ಆಕ್ರೋಶಗೊಂಡ ದೀಪ್ತಿಯ ಸಂಬಂಧಿಕರು ಹಾಗೂ ಸಾರ್ವಜನಿಕರು ಪ್ರತಿಭಟನೆ ನಡೆಸಿದರು. ಮೃತದೇಹವನ್ನು ಆಂಬುಲೆನ್ಸ್‌ನಲ್ಲೇ ಕದ್ರಿ ಸಂಚಾರಿ ಪೊಲೀಸ್ ಠಾಣೆ ಬಳಿಗೆ ತಂದು, ಖಾಸಗಿ ಬಸ್‌ಗಳ ಆರ್ಭಟ ಹಾಗೂ ನಿರ್ಲಕ್ಷ್ಯ ಚಾಲನೆಯ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು.

ಪ್ರತಿಭಟನಾಕಾರರು ಕದ್ರಿ ಸಂಚಾರಿ ಪೊಲೀಸ್ ಠಾಣೆಗೆ ಮುತ್ತಿಗೆ ಹಾಕುವ ಯತ್ನ ನಡೆಸಿದ್ದು, ಕೆಲಕಾಲ ಉದ್ವಿಗ್ನ ವಾತಾವರಣ ನಿರ್ಮಾಣವಾಯಿತು. ಖಾಸಗಿ ಬಸ್‌ಗಳ ನಿಯಂತ್ರಣ, ವೇಗ ಮಿತಿ ಕಟ್ಟುನಿಟ್ಟಾಗಿ ಜಾರಿಗೊಳಿಸುವುದು ಹಾಗೂ ಇಂತಹ ಅಪಘಾತಗಳಿಗೆ ಕಾರಣರಾಗುವ ಚಾಲಕರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಬೇಕೆಂದು ಪ್ರತಿಭಟನಾಕಾರರು ಆಗ್ರಹಿಸಿದ್ದಾರೆ.

ಘಟನೆ ಸಂಬಂಧ ಕದ್ರಿ ಸಂಚಾರಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಖಾಸಗಿ ಬಸ್ ಚಾಲಕನ ವಿರುದ್ಧ ತನಿಖೆ ಮುಂದುವ–ರಿದಿದೆ. ಯುವತಿಯ ಅಕಾಲಿಕ ಸಾವಿನಿಂದ ಕುಟುಂಬಸ್ಥರಲ್ಲಿ ಶೋಕದ ವಾತಾವರಣ ಆವರಿಸಿದ್ದು, ನಗರದಲ್ಲಿ ರಸ್ತೆ ಸುರಕ್ಷತೆ ಕುರಿತ ಚರ್ಚೆ ಮತ್ತೆ ಮುನ್ನೆಲೆಗೆ ಬಂದಿದೆ.

## ಫೈನಾನ್ಸ್ ಸಿಬ್ಬಂದಿ ಬೆದರಿಕೆ–ವಿಷ ಕುಡಿದು ರೈತ ಆತ್ಮಹತ್ಯೆ



**ಹಾಸನ:** ಮನೆ ಸೀಜ್ ಮಾಡಲಾಗುತ್ತದೆ ಎಂದು ಫೈನಾನ್ಸ್ ಸಿಬ್ಬಂದಿ ಬೆದ–ರಿಕೆ ಹಾಕಿದ್ದಕ್ಕೆ ಮನನೊಂದು ರೈತನೊಬ್ಬ ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿರುವ ದುರ್ಘಟನೆ ಶ್ರವಣಬೆಳಗೊಳ ಸಮೀಪದ ಕೊತ್ತನಘಟ್ಟ ಗ್ರಾಮದಲ್ಲಿ ನಡೆದಿದೆ. ಈ ಘಟನೆ ಗ್ರಾಮದಲ್ಲಿ ಶೋಕ ಮತ್ತು ಆಕ್ರೋಶಕ್ಕೆ ಕಾರಣವಾಗಿದೆ.

ವಿಷ ಸೇವಿಸಿ ಆತ್ಮಹತ್ಯೆಗೆ ಶರಣಾದ ರೈತನನ್ನು ಯೋಗೇಶ್ (50) ಎಂದು ಗುರುತಿಸಲಾಗಿದೆ. ಯೋಗೇಶ್ ಚನ್ನರಾಯಪಟ್ಟಣದಲ್ಲಿನ ಖಾಸಗಿ ಫೈನಾನ್ಸ್ ಸಂಸ್ಥೆಯೊಂದರಲ್ಲಿ ಸುಮಾರು 7 ಲಕ್ಷ ರೂಪಾಯಿ ಸಾಲ ಪಡೆದಿದ್ದರು. ಪ್ರಾರಂಭದಲ್ಲಿ ಪ್ರತಿ ತಿಂಗಳು ನಿಯಮಿತವಾಗಿ ಕಂತುಗಳನ್ನು ಪಾವತಿಸುತ್ತಿದ್ದ ಅವರು, ಇತ್ತೀಚಿನ ದಿನಗಳಲ್ಲಿ ಎದುರಾದ ವೈಯಕ್ತಿಕ ಹಾಗೂ ಆರ್ಥಿಕ ಸಮಸ್ಯೆಗಳ ಕಾರಣದಿಂದ ಕಳೆದ ಎರಡು ತಿಂಗಳ ಕಂತುಗಳನ್ನು ಪಾವತಿಸಲು ಸಾಧ್ಯವಾಗಿರಲಿಲ್ಲ ಎಂದು ತಿಳಿದುಬಂದಿದೆ.

ಪೊಲೀಸ್ ಮತ್ತು ಕುಟುಂಬಸ್ಥರ ಮಾಹಿತಿ ಪ್ರಕಾರ, ಫೆಬ್ರವರಿ 4ರ ರಾತ್ರಿ ಯೋಗೇಶ್ ಮನೆಗೆ ಫೈನಾನ್ಸ್ ಸಂಸ್ಥೆಯ ಇಬ್ಬರು ಸಿಬ್ಬಂದಿ ಆಗಮಿಸಿದ್ದು, ಬಾಕಿ ಕಂತುಗಳ ಬಗ್ಗೆ ತೀವ್ರವಾಗಿ ಪ್ರಶ್ನಿಸಿದ್ದಾರೆ. ಇದೇ ವೇಳೆ ಮನೆ ಸೀಜ್ ಮಾಡಲಾಗುತ್ತದೆ ಎಂದು ಬೆದರಿಕೆ ಹಾಕಿದ್ದಾರೆ ಎನ್ನಲಾಗಿದೆ. ಈ ಮಾತುಗಳಿಂದ ತೀವ್ರವಾಗಿ ಮನನೊಂದ ಯೋಗೇಶ್, ಸಮಾಜದಲ್ಲಿ ಮಾನಹಾನಿಯಾಗುವ ಭಯದಿಂದ ಹಾಗೂ ಒತ್ತಡಕ್ಕೆ ಒಳಗಾಗಿ ವಿಷ ಸೇವಿಸಿ ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಕುಟುಂಬಸ್ಥರು ಆರೋಪಿಸಿದ್ದಾರೆ.

ಘಟನೆ ತಿಳಿಯುತ್ತಿದ್ದಂತೆಯೇ ಯೋಗೇಶ್ ಅವರನ್ನು ಆಸ್ಪತ್ರೆಗೆ ಕರೆದೊಯ್ಯಲು ಯತ್ನಿಸಲಾದರೂ, ಅಷ್ಟರಲ್ಲಿ ಅವರು ಮೃತಪಟ್ಟಿದ್ದಾರೆ ಎಂದು ವೈದ್ಯರು ತಿಳಿಸಿದ್ದಾರೆ. ರೈತನ ಅಕಾಲಿಕ ಸಾವಿನಿಂದ ಕುಟುಂಬಸ್ಥರು ತೀವ್ರ ಆಘಾತಕ್ಕೆ ಒಳಗಾಗಿದ್ದು, ಗ್ರಾಮದಲ್ಲಿ ಶೋಕದ ವಾತಾವರಣ ಆವರಿಸಿದೆ.

ಈ ಘಟನೆಗೆ ಫೈನಾನ್ಸ್ ಸಂಸ್ಥೆಯ ದೌರ್ಜನ್ಯ ಮತ್ತು ಒತ್ತಡವೇ ಕಾರಣ ಎಂದು ಆರೋಪಿಸಿ, ಮೃತ ರೈತನ ಕುಟುಂಬಸ್ಥರು ಹಾಗೂ ಗ್ರಾಮಸ್ಥರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಸ್ಥಳಕ್ಕೆ ಭೇಟಿ ನೀಡಿದ ಪೊಲೀಸರು ಪರಿಶೀಲನೆ ನಡೆಸಿದ್ದು, ಪ್ರಕರಣ ದಾಖಲಿಸಿಕೊಂಡು ಹೆಚ್ಚಿನ ತನಿಖೆ ಆರಂಭಿಸಿದ್ದಾರೆ. ಫೈನಾನ್ಸ್ ಸಿಬ್ಬಂದಿಯ ವರ್ತನೆ ಮತ್ತು ಬೆದರಿಕೆ ಕುರಿತು ಪರಿಶೀಲನೆ ನಡೆಸಲಾಗುತ್ತಿದೆ ಎಂದು ಪೊಲೀಸರು ತಿಳಿಸಿದ್ದಾರೆ.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203,
Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ಕ್ರೂಸರ್, ಕ್ಯಾಂಟರ್ ನಡುವೆ ಡಿಕ್ಕಿ – ಮೂವರು ಮಹಿಳೆಯರು ಸ್ಥಳದಲ್ಲೇ ಸಾವು



**ಗದಗ:** ಕ್ರೂಸರ್ ಮತ್ತು ಕ್ಯಾಂಟರ್ ನಡುವೆ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಮೂವರು ರೈತ ಮಹಿಳೆಯರು ಸ್ಥಳದಲ್ಲೇ ಸಾವನ್ನಪ್ಪಿದ ದುರ್ಘಟನೆ ಗದಗ ಜಿಲ್ಲೆಯ ರೋಣ ತಾಲೂಕಿನ ಜಿಗಳೂರ ಕ್ರಾಸ್ ಬಳಿ ನಡೆದಿದೆ. ಈ ಅಪಘಾತ ಸ್ಥಳೀಯರಲ್ಲಿ ತೀವ್ರ ಶೋಕ ಮತ್ತು ಆತಂಕವನ್ನು ಮೂಡಿಸಿದೆ.

ಅಪಚಿಘಾತದಲ್ಲಿ ಮೃತಪಟ್ಟವರನ್ನು ಗಜೇಂದ್ರ ಗಡದ ಶಿವಾಜಿಪೇಟೆ ನಿವಾಸಿಗಳಾದ ಅನ್ನಪೂರ್ಣ (56), ಸಂಗೀತಾ ಹೊಸಮನಿ (48) ಮತ್ತು ಮರಿಯಂಬೂ ಹುನಗುಂದ (55) ಎಂದು ಗುರುತಿಸಲಾಗಿದೆ. ಮೃತ ಮಹಿಳೆಯರು ದಿನಸಿ ಜೀವನಕ್ಕಾಗಿ ರೋಣ ಕಡೆಗೆ ಕಡಲೆ ಕೀಳುವ ಕೆಲಸಕ್ಕೆ ತೆರಳುತ್ತಿದ್ದರು ಎಂದು ತಿಳಿದುಬಂದಿದೆ.

ಪ್ರಾಥಮಿಕ ಮಾಹಿತಿಯಂತೆ, ವೇಗವಾಗಿ ಸಂಚ–ರಿಸುತ್ತಿದ್ದ ಕ್ರೂಸರ್ ಹಾಗೂ ಕ್ಯಾಂಟರ್ ಪರಸ್ಪರ ಡಿಕ್ಕಿ ಹೊಡೆದ ಪರಿಣಾಮ ಅಪಘಾತ ಸಂಭವಿಸಿದೆ. ಡಿಕ್ಕಿಯ ತೀವ್ರತೆಗೆ ಕ್ರೂಸರ್‌ನಲ್ಲಿದ್ದ ಮೂವರು ಮಹಿಳೆಯರು ಸ್ಥಳದಲ್ಲೇ ಮೃತಪಟ್ಟಿದ್ದು, ಇನ್ನೂ ಕೆಲವರು ಗಂಭೀರವಾಗಿ ಗಾಯಗೊಂಡಿದ್ದಾರೆ.

ಗಾಯಾಳುಗಳನ್ನು ತಕ್ಷಣ ಗದಗದ ಜಿಮ್ಸ್ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಅವರಲ್ಲಿ ಕೆಲವರ ಸ್ಥಿತಿ ಚಿಂತಾಜನಕವಾಗಿದೆ ಎಂದು ವೈದ್ಯಕೀಯ ಮೂಲಗಳು ತಿಳಿಸಿವೆ. ಹೀಗಾಗಿ ಸಾವಿನ ಸಂಖ್ಯೆ ಇನ್ನೂ ಏರಿಕೆಯಾಗುವ ಸಾಧ್ಯತೆ ಇದೆ ಎಂಬ ಆತಂಕ ವ್ಯಕ್ತವಾಗಿದೆ.

ಘಟನೆಯ ಮಾಹಿತಿ ತಿಳಿದ ತಕ್ಷಣವೇ ರೋಣ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಅಪಘಾತಕ್ಕೆ ಸಂಬಂಧಿಸಿದಂತೆ ಪ್ರಕರಣ ದಾಖಲಿಸಿಕೊಂಡು, ಅಪಘಾತದ ನಿಖರ ಕಾರಣಗಳ ಬಗ್ಗೆ ತನಿಖೆ ಆರಂಭಿಸಿದ್ದಾರೆ.

ಇತ್ತ ಆಸ್ಪತ್ರೆ ಮುಂಭಾಗದಲ್ಲಿ ಮೃತರ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದ್ದು, ತಮ್ಮ ಪ್ರೀತಿಪಾತ್ರರನ್ನು ಕಳೆದುಕೊಂಡ ನೋವಿನಲ್ಲಿ ಸಂಬಂಧಿಕರು ಅಳಲು ತೋಡಿಕೊಂಡಿದ್ದಾರೆ. ಈ ದುರ್ಘಟನೆ ಗ್ರಾಮೀಣ ಪ್ರದೇಶದ ಮಹಿಳಾ ಕಾರ್ಮಿಕರ ಸುರಕ್ಷತೆ ಮತ್ತು ರಸ್ತೆ ಅಪಘಾತಗಳ ಭೀತಿಯನ್ನು ಚರ್ಚೆಗೆ ತಂದಿದೆ.




# ರಾಜಸ್ಥಾನದಲ್ಲೂ ಹನಿಮೂನ್ ಮರ್ಡರ್: ಪ್ರಿಯಕರನಿಂದ ಪತಿ ಕೊಲ್ಲಿಸಿದ ಪತ್ನಿ

**ಮೇಘಾಲಯ:** ಸೋನಮ್ ರಘುವಂಶಿ ಎಂಬ ಮಹಿಳೆ ತನ್ನ ಪತಿ ರಾಜಾರಘುವಂಶಿಯನ್ನು ಪ್ಲಾನ್ ಮಾಡಿ ಹನಿಮೂನ್ ಹತ್ಯೆ ಮಾಡಿದ್ದಳು. ಆದರೆ ಇದೀಗ ರಾಜಸ್ಥಾನದಲ್ಲಿ ಅದೇ ಮಾದರಿಯ ಮತ್ತೊಂದು ಭೀಕರ ಘಟನೆ ಬೆಳಕಿಗೆ ಬಂದಿದೆ. ಮೊದಲ ನೋಟಕ್ಕೆ ಇದು ಸಾಮಾನ್ಯ ಹಿಟ್ & ರನ್ ಹಾಗೂ ಲೂಟಿ ಪ್ರಕರಣವೆಂದು ಕಂಡಿತ್ತು. ತನಿಖೆ ಮುಂದುವರಿದಂತೆ ಇದು ನವವಿವಾಹಿತ ಪತ್ನಿಯೇ ರೂಪಿಸಿದ್ದ ಹನಿಮೂನ್ ಕೊಲೆ ಸಂಚು ಎಂಬುದು ಬಹಿರಂಗವಾಗಿದೆ.

ರಾಜಸ್ಥಾನದ ಶ್ರೀಗಂಗಾನಗರ ಜಿಲ್ಲೆಯಲ್ಲಿ ನವವಿವಾಹಿತ ದಂಪತಿಗಳಾದ ಆಶಿಶ್ ಮತ್ತು ಅಂಜು ಊಟದ ನಂತರ ವಾಕಿಂಗ್‌ಗೆ ಹೊರಟಿದ್ದರು. ಆ ವೇಳೆ ವಾಹನವೊಂದು ಅವ–ರಿಗೆ ಡಿಕ್ಕಿ ಹೊಡೆದಿದೆ ಎಂದು ಪೊಲೀಸರಿಗೆ ಮಾಹಿತಿ ಲಭ್ಯವಾಯಿತು. ಸ್ಥಳಕ್ಕೆ ಧಾವಿಸಿದ ಪೊಲೀಸರು, ರಸ್ತೆಯಲ್ಲಿ ಆಶಿಶ್ ಮೃತದೇಹವನ್ನು ಹಾಗೂ ಪತ್ನಿ ಅಂಜು ಪ್ರಜ್ಞಾಹೀನ ಸ್ಥಿತಿಯಲ್ಲಿ ಬಿದ್ದಿರುವುದನ್ನು ಕಂಡರು. ತಕ್ಷಣ ಇಬ್ಬರನ್ನೂ ಆಸ್ಪತ್ರೆಗೆ ಕರೆದೊಯ್ಯಲಾಯಿತು. ಆದರೆ ವೈದ್ಯರು ಆಶಿಶ್ ಸ್ಥಳದಲ್ಲೇ ಮೃತಪಟ್ಟಿರುವುದಾಗಿ ಘೋಷಿಸಿದರು.

ಆರಂಭದಲ್ಲಿ ಅಂಜು, ಅಪರಿಚಿತ ವಾಹನ ಡಿಕ್ಕಿ ಹೊಡೆದು ಅಪಘಾತ ಸಂಭವಿಸಿದ್ದು, ನಂತರ ದುಷ್ಕರ್ಮಿಗಳು ತನ್ನ ಚಿನ್ನಾಭರಣಗಳನ್ನು ದೋಚಿ ಪರಾರಿಯಾಗಿದ್ದಾರೆ ಎಂಬ ಹೇಳಿಕೆ ನೀಡಿದ್ದಳು. ಈ ಹಿನ್ನೆಲೆ ಪೊಲೀಸರು ಹಿಟ್ & ರನ್ ಹಾಗೂ ಲೂಟಿ ಪ್ರಕರಣ ದಾಖಲಿಸಿದ್ದರು. ಆದರೆ ತನಿಖೆ ಮುಂದುವರಿದಂತೆ ಹಲವು ಅನುಮಾನಾಸ್ಪದ ಅಂಶಗಳು ಪೊಲೀಸರ ಗಮನ ಸೆಳೆದವು.

ವಿಧಿವಿಜ್ಞಾನ ತಂಡದ ಪರಿಶೀಲನೆ ವೇಳೆ ಆಶಿಶ್ ದೇಹದಲ್ಲಿ ಕಂಡುಬಂದ ಗಾಯದ ಗುರುತುಗಳು ಅಪಘಾತಕ್ಕೆ ಹೊಂದಿಕೆಯಾಗಿರಲಿಲ್ಲ. ವೈದ್ಯಕೀಯ ವರದಿಯ ಪ್ರಕಾರ ಆಶಿಶ್ ಅವರನ್ನು ಕತ್ತು ಹಿಸುಕಿ ಕೊಂದಿದ್ದಾರೆ ಎಂಬ ಅನುಮಾನ ಮೂಡಿತ್ತು. ಇನ್ನೊಂದೆಡೆ, ಅಂಜು ಅವರ ದೇಹದಲ್ಲಿ ಯಾವುದೇ ಗಂಭೀರ ಗಾಯಗಳಿರಲಿಲ್ಲ. ಇದು ಪೊಲೀಸರಿಗೆ ಇನ್ನಷ್ಟು ಅನುಮಾನಕ್ಕೆ ಕಾರಣವಾಯಿತು.

ಶ್ರೀಗಂಗಾನಗರದ ಪೊಲೀಸ್ ವ–ರಿಷ್ಠಾಧಿಕಾರಿ ಅಮೃತಾ ದುಹಾನ್ ಅವರ ನೇತೃತ್ವದಲ್ಲಿ ತನಿಖೆ ತೀವ್ರಗೊಂಡಿತು. ಅಂಜು ನೀಡುತ್ತಿದ್ದ ಹೇಳಿಕೆಗಳು ಪದೇಪದೇ ಬದಲಾಗುತ್ತಿದ್ದವು. ಇದರ ಬೆನ್ನಲ್ಲೇ ಪೊಲೀಸರು ಅಂಜು ಅವರ ಮೊಬೈಲ್ ಫೋನ್ ದಾಖಲೆಗಳನ್ನು ಪರಿಶೀಲಿಸಿದರು.



ಫೋನ್ ಕಾಲ್ ಡೀಟೇಲ್ಸ್ ಪರಿಶೀಲನೆಯ ವೇಳೆ, ಅಂಜು ತನ್ನ ಮನೆಯ ಸಮೀಪ ವಾಸಿಸುತ್ತಿದ್ದ ಸಂಜು ಎಂಬ ವ್ಯಕ್ತಿಯೊಂದಿಗೆ ನಿರಂತರ ಸಂಪರ್ಕದಲ್ಲಿದ್ದಳು ಎಂಬುದು ಬಯಲಾಯಿತು. ತನಿಖೆಯಲ್ಲಿ ತಿಳಿದುಬಂದಂತೆ, ಅಂಜು ಮತ್ತು ಆಶಿಶ್ ಮದುವೆಯಾಗಿ ಕೇವಲ ಮೂರು ತಿಂಗಳಷ್ಟೇ ಆಗಿತ್ತು. ಆದರೆ ಅಂಜುಗೆ ಈ ಮದುವೆ ಇಷ್ಟವಿರಲಿಲ್ಲ. ಮದುವೆಯ ಬಳಿಕವೂ ಅವಳು ಬೇಸರಗೊಂಡಿದ್ದಳು ಮತ್ತು ಕೆಲವೇ ದಿನಗಳಲ್ಲಿ ತನ್ನ ತವರಿಗೆ ತೆರಳಿದ್ದಳು. ಅಲ್ಲಿ ಅವಳು ತನ್ನ ಮಾಜಿ ಪ್ರಿಯಕರ ಸಂಜು ಜೊತೆ ಮತ್ತೆ ಸಂಪರ್ಕ ಬೆಳೆಸಿಕೊಂಡಿದ್ದಳು.

ಪೊಲೀಸ್ ತನಿಖೆ ಪ್ರಕಾರ, ಅಂಜು ಮತ್ತು ಸಂಜು ಸೇರಿ ಆಶಿಶ್ ಕೊಲೆ ಸಂಚನ್ನು ರೂಪಿಸಿದ್ದರು. ಜನವರಿ 30ರ ರಾತ್ರಿ, ಅಂಜು ಉದ್ದೇಶಪೂರ್ವಕವಾಗಿ ಆಶಿಶ್‌ನನ್ನು ಒಂಟಿ ರಸ್ತೆಯತ್ತ ವಾಕಿಂಗ್‌ಗೆ ಕರೆದೊಯ್ದಳು. ಅಲ್ಲಿ ಸಂಜು ಹಾಗೂ ಅವನ ಸಹಚರರಾದ ರೋಹಿತ್ ಅಲಿಯಾಸ್ ರಾಕಿ ಮತ್ತು ಬಾದಲ್ ಅಲಿಯಾಸ್ ಸಿದ್ಧಾರ್ಥ್ ಪೊದೆಗಳಲ್ಲಿ ಅಡಗಿಕೊಂಡಿದ್ದರು.

ಪೂರ್ವನಿಯೋಜಿತ ಸಂಚಿನಂತೆ, ಮೂವರು ದಾಳಿಕೋರರು ಆಶಿಶ್ ಮೇಲೆ ಕ್ರೂರವಾಗಿ ಹಲ್ಲೆ ನಡೆಸಿ ಕತ್ತು ಹಿಸುಕಿ ಕೊಂದಿದ್ದಾರೆ. ನಂತರ ಅದನ್ನು ರಸ್ತೆ ಅಪಘಾತವೆಂದು ತೋರಿಸಲು ಯತ್ನಿಸಲಾಯಿತು. ಅಲ್ಲದೇ ಅಂಜು ತನ್ನ ಫೋನ್ ಹಾಗೂ ಕಿವಿಯೋಲೆಗಳನ್ನು ಆರೋಪಿಗಳಿಗೆ ನೀಡಿದ್ದಳು. ದಾಳಿ ಬಳಿಕ ಅವಳು ರಸ್ತೆಯಲ್ಲಿ ಪ್ರಜ್ಞಾಹೀನಳಂತೆ ನಟಿಸಿದ್ದಳು.

ಆದರೆ ಆಶಿಶ್ ದೇಹದ ಗಾಯದ ಗುರುತುಗಳು, ಅಂಜು ನೀಡಿದ ಹೇಳಿಕೆಯಲ್ಲಿನ ವ್ಯತ್ಯಾಸಗಳು ಮತ್ತು ತಾಂತ್ರಿಕ ಸಾಕ್ಷ್ಯಗಳು ಕೊನೆಗೂ ಸತ್ಯವನ್ನು ಬಯಲಿಗೆಳೆದಿದೆ. ಪೊಲೀಸರು ಅಂಜು, ಆಕೆಯ ಪ್ರಿಯಕರ ಸಂಜು ಹಾಗೂ ಇನ್ನಿಬ್ಬರು ಆರೋಪಿಗಳನ್ನು ಬಂಧಿಸಿದ್ದಾರೆ.

# ಕಿವಿ ಕೇಳದ, ಮಾತು ಬಾರದ ಪುತ್ರಿ ಮೇಲೆ ಅತ್ಯಾಚಾರ ಎಸಗಿ ಗರ್ಭಿಣಿ ಮಾಡಿದ ತಂದೆ

**ಮುಂಬೈ:** ನಗರದ ಕೆಫೆ ಪರೇಡ್ ಪ್ರದೇಶದ ನೆರೆಹೊರೆಯಲ್ಲಿ ಕಿವಿ ಕೇಳದ ಹಾಗೂ ಮಾತು ಬಾರದ ಸುಮಾರು 20 ವರ್ಷದ ಯುವತಿಯ ಮೇಲೆ ಆಕೆಯ ತಂದೆಯೇ ಅತ್ಯಾಚಾರ ಎಸಗಿ ಗರ್ಭಿಣಿ ಮಾಡಿರುವ ಅತ್ಯಂತ ಆಘಾತಕಾರಿ ಘಟನೆ ಬೆಳಕಿಗೆ ಬಂದಿದೆ. ಡಿಎನ್‌ಎ ಪರೀಕ್ಷೆಗಳ ಮೂಲಕ ಭ್ರೂಣದೊಂದಿಗೆ ತಂದೆಯ ನೇರ ಸಂಬಂಧ ದೃಢಪಟ್ಟ ನಂತರ, ಪೊಲೀಸರು ಆರೋಪಿಯನ್ನು ಬಂಧಿಸಿದ್ದಾರೆ.

ಪ್ರಕರಣ ಬೆಳಕಿಗೆ ಬಂದ ಹಿನ್ನೆಲೆ ಕೂಡ ನೋವು ತಂದಿದೆ. ಯುವತಿ ಇತ್ತೀಚಿನ ದಿನಗಳಲ್ಲಿ ದೈಹಿಕ ಅಸ್ವಸ್ಥತೆ ಅನುಭವಿಸುತ್ತಿದ್ದಳು. "ತುಂಬಾ ಸುಸ್ತಾಗುತ್ತಿದೆ" ಎಂದು ಆಕೆ ತನ್ನ ಅಜ್ಜಿಯ ಬಳಿ ಹೇಳಿಕೊಂಡಿದ್ದಾಳೆ. ಕೈ ಸನ್ನೆಗಳ ಮೂಲಕ ತನ್ನ ಹೊಟ್ಟೆಯಲ್ಲಿ ಏನೋ ತೇವಳುತ್ತಿರುವಂತೆ ಅನುಭವವಾಗುತ್ತಿದೆ ಎಂಬುದನ್ನೂ ತಿಳಿಸಿದ್ದಾಳೆ. ಈ ಹಿನ್ನೆಲೆಯಲ್ಲಿ ಕುಟುಂಬಸ್ಥರು ಆಕೆಯನ್ನು ನಗರದ ಕ್ಯಾಮಾ ಮತ್ತು ಆಲ್ಬೆಸ್ ಆಸ್ಪತ್ರೆಗೆ ದಾಖಲಿಸಿದ್ದಾರೆ.

ವೈದ್ಯಕೀಯ ಪರೀಕ್ಷೆ ನಡೆಸಿದಾಗ ಯುವತಿ ಸುಮಾರು ಐದು ತಿಂಗಳ ಗರ್ಭಿಣಿಯಾಗಿರುವುದು ದೃಢಪಟ್ಟಿದೆ. ಇದು ಗಂಭೀರ ಅಪರಾಧದ ಅನುಮಾನಕ್ಕೆ ಕಾರಣವಾದ ಹಿನ್ನೆಲೆಯಲ್ಲಿ ಆಸ್ಪತ್ರೆ ಆಡಳಿತ ಮಂಡಳಿ ತಕ್ಷಣ ಪೊಲೀಸರಿಗೆ ಮಾಹಿತಿ ನೀಡಿದೆ.

ಪೊಲೀಸರು ವಿಚಾರವನ್ನು ಯುವತಿಯ ತಂದೆಗೆ ತಿಳಿಸಿದಾಗ, ಪುತ್ರಿ ಗರ್ಭಿಣಿಯಾಗಿರುವ ವಿಷಯವನ್ನೇ ಆತ ನಿರಾಕರಿಸಿದ್ದಾನೆ. ಅಲ್ಲದೆ, ಪ್ರಕರಣಕ್ಕೆ ಸಂಬಂಧಿಸಿದಂತೆ ದೂರು ದಾಖಲಿಸಲು ಕೂಡ ಒಪ್ಪಿಗೆ ನೀಡಿರಲಿಲ್ಲ ಎಂದು ಪೊಲೀಸ್ ಮೂಲಗಳು ತಿಳಿಸಿವೆ. ನಂತರ ಕೌನ್ಸಿಲಿಂಗ್ ನಡೆಸಿದ ಬಳಿಕ ಯುವತಿ ದೂರು ದಾಖಲಿಸಲು ಒಪ್ಪಿಕೊಂಡಿದ್ದಾಳೆ.

ಯುವತಿ ನೀಡಿದ ಮಾಹಿತಿಯ ಆಧಾರದ ಮೇಲೆ ಪೊಲೀಸರು ಮೊದಲು ಮತ್ತೊಬ್ಬ ವ್ಯಕ್ತಿ ಹಾಗೂ 17 ವರ್ಷದ ಬಾಲಕನನ್ನು ಬಂಧಿಸಿದ್ದರು. ಈ ಇಬ್ಬರೂ ತನ್ನ ಮೇಲೆ ಅತ್ಯಾಚಾರ ಎಸಗಿದ್ದಾರೆ ಎಂದು ಯುವತಿ ಗುರುತಿಸಿದ್ದಾಳೆ. ಈ ಹಿನ್ನೆಲೆಯಲ್ಲಿ ಪೊಲೀಸರು ಪ್ರಕರಣದಲ್ಲಿ ಇನ್ನೂ ಇತರರ ಪಾತ್ರವಿದೆಯೇ ಎಂಬ ದಿಕ್ಕಿನಲ್ಲಿ ತನಿಖೆ ಮುಂದುವರಿಸಿದ್ದಾರೆ.

ತನಿಖೆಯ ಭಾಗವಾಗಿ, ಒಟ್ಟು 17 ಶಂಕಿತರಿಂದ ಡಿಎನ್‌ಎ ಮತ್ತು ರಕ್ತದ ಮಾದ–ರಿಗಳನ್ನು ಸಂಗ್ರಹಿಸಿ ಪ್ರಯೋಗಾಲಯಕ್ಕೆ ಕಳುಹಿಸಲಾಗಿತ್ತು. ಭ್ರೂಣದಿಂದ ಪಡೆದ ಆನುವಂಶಿಕ ದತ್ತಾಂಶದೊಂದಿಗೆ ಈ ಮಾದ–ರಿಗಳನ್ನು ಹೋಲಿಕೆ ನಡೆಸಿದಾಗ, ಸಂತ್ರಸ್ತೆಯ ತಂದೆಯ ಡಿಎನ್‌ಎ ಮ್ಯಾಚ್ ಆಗಿರುವುದು ದೃಢಪಟ್ಟಿದೆ. ಈ ಮಹತ್ವದ ವೈಜ್ಞಾನಿಕ ಸಾಕ್ಷ್ಯದ ಆಧಾರದಲ್ಲಿ ಪೊಲೀಸರು ಆಕೆಯ ತಂದೆಯನ್ನು ಬಂಧಿಸಿ ವಿಚಾರಣೆಗೆ ಒಳಪಡಿಸಿದ್ದಾರೆ.

ಪ್ರಕರಣದ ತನಿಖೆ ಮುಂದುವ–ರಿದಿದ್ದು, ಸಂತ್ರಸ್ತೆಯ ಮೇಲೆ ನಡೆದ ಅಪರಾಧದಲ್ಲಿ ಇನ್ನಾರಾದರೂ ಭಾಗಿಯಾಗಿದ್ದಾರೆಯೇ ಎಂಬುದನ್ನು ಪತ್ತೆ ಹಚ್ಚಲು ಪೊಲೀಸರು ಹೆಚ್ಚಿನ ತನಿಖೆ ನಡೆಸುತ್ತಿದ್ದಾರೆ. ಈ ಘಟನೆ ಕುಟುಂಬದೊಳಗೇ ನಡೆದ ಭೀಕರ ಅಪರಾಧವಾಗಿ ಸಮಾಜವನ್ನು ಬೆಚ್ಚಿಬೀಳುವಂತೆ ಮಾಡಿದ್ದು, ಮಾನಸಿಕ ಹಾಗೂ ದೈಹಿಕವಾಗಿ ಅಸಹಾಯ ಸ್ಥಿತಿಯಲ್ಲಿರುವವರ ರಕ್ಷಣೆಯ ಕುರಿತು ಗಂಭೀರ ಪ್ರಶ್ನೆಗಳನ್ನು ಎತ್ತಿದೆ.

# ಫೆಬ್ರವರಿ 12 ರಂದು ಅಖಿಲ ಭಾರತ ಸಾರ್ವತ್ರಿಕ ಮುಷ್ಕರ
## ಮುಷ್ಕರಕ್ಕೆ ವಿವಿಧ ಸಂಘಟನೆಗಳ ಬೆಂಬಲ ಕೋರಿದ ಮುಖಂಡರು



**ದೊಡ್ಡಬಳ್ಳಾಪುರ:**ಕೇಂದ್ರ ಸರ್ಕಾರ ಜಾರಿಗೆ ತಂದಿರುವ ಜನವಿರೋಧಿ ಮಸೂಧೆಗಳನ್ನು ರದ್ದುಪಡಿಸುವಂತೆ ಅಗ್ರಹಿಸಿ ಫೆಬ್ರವರಿ 12 ರಂದು ಅಖಿಲ ಭಾರತ ಸಾರ್ವತ್ರಿಕ ಮುಷ್ಕರ ನಡೆಯಲಿದೆ ಈ ಮುಷ್ಕರವನ್ನು ಉತ್ಪಾದನೆ, ಸೇವೆ ಸ್ಥಗಿತಗೊಳಿಸಸುವ ಮೂಲಕ ಕಾರ್ಮಿಕರು, ರೈತರು, ದಲಿತರು, ಯುವ ಸಮುದಾಯ ಮಹಿಳಾ ಸಂಘಟನೆಗಳು ಹಾಗೂ ಎಲ್ಲಾ ರೀತಿಯ ವ್ಯಾಪಾರ ವಹಿವಾಟುಗಳನ್ನು ಸ್ಥಗಿ–ತಗೊಳಿಸಿ ಸ್ವಯಂ ಪ್ರೇರಿತ ಬಂದ್ ಗೆ ಬೆಂಬಲ ನೀಡಬೇಕೆಂದು ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿ ಮತ್ತು ಸಂಯುಕ್ತ ಹೋರಾಟ ಕರ್ನಾಟಕ ದ ಪ್ರಮುಖರು ಮನವಿ ಮಾಡಿದರು.

ನಗರದ ಪ್ರವಾಸಿ ಮಂದಿರದಲ್ಲಿ ಕೇಂದ್ರ ಕಾರ್ಮಿಕ ಸಂಘಟನೆಗಳ ಜಂಟಿ ಸಮಿತಿ ಮತ್ತು ಸಂಯುಕ್ತ ಹೋರಾಟ– ಕರ್ನಾಟಕ ವತಿಯಿಂದ ನಡೆದ ಪತ್ರಿಕಾಗೋಷ್ಠಿಯಲ್ಲಿ ಭಾಗವಹಿಸಿ ಮಾತನಾಡಿದ ಅವರು ಕೇಂದ್ರ ಸರ್ಕಾರವು ದೇಶದ ಕಾರ್ಮಿಕರ ವಿರುದ್ಧ 4 ಕಾರ್ಮಿಕ ಮಸೂದೆ ಗಳನ್ನು ಜಾರಿಗೋಳಿಸಿದ್ದು ಕಾರ್ಮಿಕರಿಗೆ ಮಾರಕವಾದ ಈ ಮಸೂದೆಗಳನ್ನು ರದ್ದುಗೊಳಿಸ 'ಬೇಕು.ಬಡವರ ಜೀವನಧಾರವಾಗಿರುವ ನರೇಗಾ ಯೋಜನೆಯನ್ನು ಪುನರ್ ಸ್ಥಾಪಿಸಿ ಜಿ–ಬಿರಾಮ್‌ಜಿ ಕಾಯ್ದೆ ಹಾಗೂ ಭೂ ಸ್ವಾಧೀನ ಕಾಯ್ದೆಯನ್ನು ಹಿಂಪಡೆಯಲು ಒತ್ತಾಯಿಸಿ ರಾಷ್ಟ್ರವ್ಯಾಪಿ ಮುಷ್ಕರಕ್ಕೆ ಕಾರ್ಮಿಕರು ಮುಂದಾಗಿದ್ದೇವೆ ಎಂದರು.

ಮುಖಂಡರಾದ ವೆಂಕಟೇಶ್ ಮಾತನಾಡಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ತಂದಿರುವ ಭೂಸುಧಾರಣಾ, ಜಾನುವಾರು ಸಂರಕ್ಷಣಾ ತಿದ್ದುಪಡಿ ಕಾಯ್ದೆಗಳನ್ನು ಹಿಂಪಡೆಯಬೇಕು.ದೇಶದ ವಿದ್ಯುಚ್ಛಕ್ತಿ ಖಾಸಗೀಕರಣ ಮಾಡಲು ಹೊರಟಿರುವ ಕೇಂದ್ರ ಸರ್ಕಾರದ ನಿಲುವು ಬದಲಾಗಬೇಕು, ರೈತರಿಗೆ ಮಾರಕವಾಗಿರುವ ಬೀಜ ಮಸೂದೆ ಕಾಯ್ದೆಯನ್ನ ಹಿಂಪಡೆಯಬೇಕು, ವಿಮಾ ತಿದ್ದುಪಡಿ ಕಾಯ್ದೆ. ಶಾಂತಿ ಕಾಯ್ದೆರದ್ದುಗೊಳಿಸಿ ಕರ್ನಾಟಕ ಸರ್ಕಾರ ಕಾರ್ಮಿಕ ಸಂಹಿತೆಗಳಿಗೆ ಈಗ ತಂದಿರುವ ಗೆಜೆಟ್ ನೋಟಿಫಿಕೇಷನ್ನನ್ನು ವಾಪಸ್ಸು ಪಡೆಯಬೇಕು. ಮತ್ತು ಒಕ್ಕೂಟ ಸರ್ಕಾರ ತಂದಿರುವ ಜನವಿರೋಧಿ ಮಸೂದೆಗಳನ್ನು ಹಿಂಪಡೆಯಬೇಕು ಎಂದರು.

ಫೆಬ್ರವರಿ 12 ರಂದು ರಾಜ್ಯದಲ್ಲಿ ಕೇಂದ್ರ ಮತ್ತು ಸ್ವತಂತ್ರ ಕಾರ್ಮಿಕ ಸಂಘಗಳು ಎಲ್ಲಾ ರೈತ ಸಂಘಗಳು, ಕೂಲಿಕಾರ ಸಂಘಟನೆಗಳು, ಕನ್ನಡಪರ ಸಂಘಟನೆಗಳು, ದಲಿತ ಸಂಘಟನೆಗಳು, ಮಹಿಳಾ ಸಂಘಟನೆಗಳು ಮತ್ತು ವಿದ್ಯಾರ್ಥಿ–ಯುವಜನ ಸಂಘಟನೆಗಳು ಸೇರಿ ಮುಷ್ಕರ ನಡೆಸಲಾಗುತ್ತಿದೆ. ಅಂದು ಎಲ್ಲಾ ವಿಭಾಗದ ಜನತೆ ತಮ್ಮ ಪ್ರತಿರೋಧವನ್ನು ವ್ಯಕ್ತಪಡಿಸಬೇಕಾಗಿ ಈ ಮೂಲಕ ವಿನಂತಿ–ಕೊಳ್ಳುತ್ತೇವೆ ಎಂದರು

ಈ ವೇಳೆ ಜೆಸಿಟಿಯು ಜಿಲ್ಲಾ ಸಂಚಾಲಕರು ಮತ್ತು ಸಿಐಟಿಯು ಜಿಲ್ಲಾ ಪ್ರಧಾನ ಕಾರ್ಯದರ್ಶಿ ಪಿ.ಎ.ವೆಂಕಟೇಶ್,ಕರ್ನಾಟಕ ಪ್ರಾಂತ ರೈತ ಸಂಘದ ಮುಖಂಡ ಆರ್ ಚಂದ್ರು ತೇಜಸ್ವಿ, ಕನ್ನಡ ಪಕ್ಷದ ರಾಜ್ಯ ಮುಖಂಡ ಸಂಜೀವ್ ನಾಯಕ್,

ಪ್ರಜಾ ವಿಮೋಚನಾ ಚಳುವಳಿ ಮುಖಂಡ ಗೂಳ್ಯ ಹನುಮಣ್ಣ, ಸಿಐಟಿಯು ಜಿಲ್ಲಾ ಖಜಾಂಚಿ ಹೆಚ್ ಎನ್ ಮೋಹನ್ ಬಾಬು,ಕೆಐಇಎಫ್ ಕಾರ್ಮಿಕ ಸಂಘದ ಮುಖಂಡ ಪ್ರಭಾಕರ್ ಎಂಜೆ,ಶಿವಕುಮಾರ್ ಹೆಚ್,ಎಐಟಿಯುಸಿ ಮುಖಂಡರಾದ ಒಟ್ಟು ಬಿಲ್ಸ್,ಮಂಜುನಾಥ್ ಎನ್, ಓಮಿನಿ,ಎಚ್ ಎಲ್ ಹೇಮಂತ್ ಕುಮಾರ್,ಎ ಐ ಯು ಟಿ ಯು ಸಿ ಜಿಲ್ಲಾ ಅಧ್ಯಕ್ಷ ಶ್ರೀಕಾಂತ್,ಕರ್ನಾಟಕ ರಾಜ್ಯ ರೈತ ಸಂಘದ ಮುತ್ತೇಗೌಡ,ನಾರಾಯಣಪ್ಪ,ವಿಜಯ ಕರ್ನಾಟಕ ರಕ್ಷಣಾ ವೇದಿಕೆಯ ಅಧ್ಯಕ್ಷ ನಂಜಪ್ಪ,ಕರ್ನಾಟಕ ರಕ್ಷಣಾ ವೇದಿಕೆ (ಪ್ರವೀಣ್ ಶೆಟ್ಟಿ ಬಣ ) ಹೆಚ್ ಎಸ್ ವೆಂಕಟೇಶ್, ಬಿರ್ಲಾ ಸೂಪರ್ ಕಾರ್ಮಿಕ ಸಂಘದ ಮುಖಂಡ ರೇಣುಕಾ ರಾಧ್ಯ, ಅನಿಲ್ ಗುಪ್ತ, ಬೀರೇಂದ್ರ ಗುಪ್ತ,ಎ ಆರ್ ಡಿ ಯು ಆಟೋ ಚಾಲಕರ ಸಂಘದ ಅಧ್ಯಕ್ಷ ಸಾಧಿಕ್ ಪಾಷಾ,

ಶಿವರಾಜ್ ಕುಮಾರ್ ಸೇನಾ ಸಮಿತಿ ಅಧ್ಯಕ್ಷ ರಮೇಶ್,ಡಾ. ರಾಜಕುಮಾರ್ ಕನ್ನಡ ಅಭಿಮಾನಿಗಳ ಸಂಘದ ಆರ್ ಎಂ ಮಹದೇವಯ್ಯ,ಡಿ ಎಸ್ ಎಸ್ ಸಂಚಾಲಕರಾದ ಸುರೇಶ್,ಕರ್ನಾಟಕ ಪ್ರಾಂತ ರೈತ ಸಂಘದ ಮುಖಂಡರಾದಸಿ ಎಚ್ ರಾಮಕೃಷ್ಣಯ್ಯ, ಸದಾಶಿವಪ್ಪ,ಇಂಡೇನ ಕಾರ್ಮಿಕ ಸಂಘದ ವಿನಯ್ ಕೆ ಸೇರಿದಂತೆ ಹಲವು ಮುಖಂಡರು ಹಾಜರಿದ್ದರು.

# ಸರಾಯಿ ಅಂಗಡಿ ವಿರುದ್ಧ ರೊಚ್ಚಿಗೆದ್ದ ಮಹಿಳೆಯರು
# 15 ಲಕ್ಷ ಮೌಲ್ಯದ ಮದ್ಯ ಧ್ವಂಸ

**ಲಲಿತ್‌ಪುರ:**ಉತ್ತರ ಪ್ರದೇಶದ ಲಲಿತ್‌ಪುರ ಜಿಲ್ಲೆಯ ಮಹರೌನಿ ಲಲಿತ್‌ಪುರ ಮುಖ್ಯ ರಸ್ತೆಯ ಬಳಿ ಇರುವ ಖಿತ್ವಾನ್ಸ್ ಗ್ರಾಮದಲ್ಲಿ ಮಹಿಳೆಯರು ತೀವ್ರ ಆಕ್ರೋಶ ವ್ಯಕ್ತಪಡಿಸಿರುವ ಘಟನೆ ರಾಜ್ಯಾದ್ಯಂತ ಭಾರೀ ಚರ್ಚೆಗೆ ಕಾರಣವಾಗಿದೆ. ಕುಡುಕ ಪುರುಷರಿಂದ ನಿರಂತರ ಕಿರುಕುಳ, ಅಶ್ಲೀಲ ವರ್ತನೆ ಮತ್ತು ಸಾಮಾಜಿಕ ಅವ್ಯವಸ್ಥೆಯಿಂದ ಬೇಸತ್ತ ಸುಮಾರು 100ಕ್ಕೂ ಹೆಚ್ಚು ಮಹಿಳೆಯರು, ಮದ್ಯದಂಗಡಿಗಳ ಮೇಲೆ ದಾಳಿ ನಡೆಸಿ ಸುಮಾರು 15 ಲಕ್ಷ ರೂಪಾಯಿ ಮೌಲ್ಯದ ಮದ್ಯವನ್ನು ರಸ್ತೆಗೆ ಸು–ರಿದು ಸಂಪೂರ್ಣವಾಗಿ ನಾಶಪಡಿಸಿದ್ದಾರೆ.

ಈ ಘಟನೆಗೆ ಸಂಬಂಧಿಸಿದ ವೀಡಿಯೋಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದ್ದು, ಮಹಿಳೆಯರ ಆಕ್ರೋಶ, ಅವರ ಸಂಘಟಿತ ಹೋರಾಟ ಹಾಗೂ ಮದ್ಯದಂಗಡಿಗಳ ವಿರುದ್ಧದ ಪ್ರತಿ–ರೋಧ ದೇಶವ್ಯಾಪಿ ಗಮನ ಸೆಳೆದಿದೆ.



**ಪ್ರತಿಭಟನೆಯವಿವರ:**ಮಂಗಳವಾರ ಮಧ್ಯಾಹ್ನ ಸುಮಾರು 12:30ರ ವೇಳೆಗೆ 100ರಿಂದ 150ರಷ್ಟು ಮಹಿಳೆಯರು ಕೈಯಲ್ಲಿ ಕೋಲುಗಳನ್ನು ಹಿಡಿದು ಮದ್ಯದಂಗಡಿಗಳ ಎದುರು ಸೇರಿದರು. ಮೊದಲು ಶಾಂತಿಯುತವಾಗಿ ಪ್ರತಿಭಟನೆ ಆರಂಭಿಸಿದ ಮಹಿಳೆಯರು, ಅಂಗಡಿಗಳನ್ನು ತಕ್ಷಣ ಮುಚ್ಚುವಂತೆ ಒತ್ತಾಯಿಸಿ ರಸ್ತೆ ತಡೆ ನಡೆಸಿದರು. ಮಹಿಳೆಯರ ಆಕ್ರೋಶ ಹೆಚ್ಚಾಗುತ್ತಿದ್ದಂತೆ, ಮದ್ಯದಂಗಡಿಯ ಮಾರಾಟಗಾರ ಹಿತೇಂದ್ರ ಕುಮಾರ್ ಶಟರ್ ಮುಚ್ಚಿ ಬೀಗ ಹಾಕಿ ಅಲ್ಲಿಂದ ಪರಾ–ರಿಯಾಗಿದ್ದು, ಪೊಲೀಸರಿಗೆ ಮಾಹಿತಿ ನೀಡಿದ್ದಾರೆ.

ಆದರೆ ಇದರಿಂದ ಮಹಿಳೆಯರ ಆಕ್ರೋಶ ತಣ್ಣಗಾಗಲಿಲ್ಲ. ಕೆಲವೇ ಕ್ಷಣಗಳಲ್ಲಿ ಮಹಿಳೆಯರು ಎರಡು ಮದ್ಯದಂಗಡಿಗಳ ಬೀಗಗಳನ್ನು ಮುರಿದು ಒಳಗೆ ನುಗ್ಗಿದರು. ಅಲ್ಲಿದ್ದ ದೇಸಿ ಶರಾಬ್, ವಿದೇಶಿ ಮದ್ಯ ಹಾಗೂ ಬಿಯರ್ ಪೆಟ್ಟಿಗೆಗಳನ್ನು ರಸ್ತೆ ಮೇಲೆ ಎಸೆದು ಧ್ವಂಸಗೊಳಿಸಿದರು. ಒಂದು ಗುಂಪು ಪೆಟ್ಟಿಗೆಗಳನ್ನು ಎಸೆದು ಮದ್ಯ ಸುರಿದರೆ, ಮತ್ತೊಂದು ಗುಂಪು ಕೋಲುಗಳಿಂದ ಬಾಟಲಿಗಳನ್ನು ಒಡೆದು ಹಾಕಿತು. ಪರಿಣಾಮವಾಗಿ ರಸ್ತೆಯ ಮೇಲೆ ಮದ್ಯದ ಹೊಳೆ ಹರಿದ ದೃಶ್ಯ ಕಂಡುಬಂತು.

**ಸಂಚಾರ ಅಸ್ತವ್ಯಸ್ತ:**ಈ ಘಟನೆ ಹಿನ್ನೆಲೆಯಲ್ಲಿ ಮಹರೌನಿ ಲಲಿತ್‌ಪುರ ಮುಖ್ಯ ರಸ್ತೆಯಲ್ಲಿ ಸುಮಾರು ಒಂದು ಗಂಟೆ ಕಾಲ ಸಂಚಾರ ಸಂಪೂರ್ಣವಾಗಿ ಸ್ಥಗಿತಗೊಂಡಿತು. ಇದರಿಂದ ಸುಮಾರು ಎರಡು ಕಿಲೋಮೀಟ–ರ್ ಉದ್ದದ ಟ್ರಾಫಿಕ್ ಜಾಮ್ ಉಂಟಾಯಿತು. ವಾಹನ ಸವಾರರು ತೀವ್ರ ತೊಂದರೆ ಅನುಭವಿಸಿದರು.

ಪೊಲೀಸರು ಸ್ಥಳಕ್ಕೆ ಆಗಮಿಸಿದರೂ ಆರಂಭದಲ್ಲಿ ಕಡಿಮೆ ಸಂಖ್ಯೆಯಲ್ಲಿದ್ದ ಕಾರಣ ಮಹಿಳೆಯರನ್ನು ನಿಯಂತ್ರಿಸಲು ಸಾಧ್ಯವಾಗಲಿಲ್ಲ. ನಂತರ ಹೆಚ್ಚಿನ ಪೊಲೀಸ್ ಪಡೆ ಆಗಮಿಸಿ ಪರಿಸ್ಥಿತಿಯನ್ನು ಹತೋಟಿಗೆ ತೆಗೆದುಕೊಂಡು, ರಸ್ತೆಯನ್ನು ಸ್ವಚ್ಛಗೊಳಿಸಿ ಸಂಚಾರವನ್ನು ಪುನಃ ಸುಗಮಗೊಳಿಸಿದರು. ಆ ವೇಳೆಗೆ ಮಹಿಳೆಯರು ತಮ್ಮ ತಮ್ಮ ಹಳ್ಳಿಗಳಿಗೆ ಹಿಂತಿ–ರುಗಿದ್ದರು.

**ಮಹಿಳೆಯರ ಗಂಭೀರ ಆರೋಪಗಳು:**ಪ್ರತಿಭಟನೆಯಲ್ಲಿ ಪಾಲ್ಗೊಂಡ ಮಹಿಳೆಯರು ಹಲವು ಗಂಭೀರ ಆರೋಪಗಳನ್ನು ಮುಂದಿಟ್ಟಿದ್ದಾರೆ.

**2025ರ ಏಪ್ರಿಲ್ ತಿಂಗಳಲ್ಲಿ ಈ ಮದ್ಯದಂಗಡಿಗಳು ಆರಂಭವಾದ ನಂತರ ರಸ್ತೆಯಲ್ಲಿ ಸುರಕ್ಷಿತವಾಗಿ ನಡೆದಾಡಲು ಸಾಧ್ಯವಾಗುತ್ತಿಲ್ಲ.**

**ಕುಡುಕರು ಮಹಿಳೆಯರು ಮತ್ತು ಹುಡುಗಿಯರ ಮೇಲೆ ಅಸಭ್ಯ ಕಾಮೆಂಟ್‌ಗಳನ್ನು ಮಾಡುತ್ತಾರೆ.**

**ಮಕ್ಕಳ ಮೇಲೆ ಕೆಟ್ಟ ಪರಿಣಾಮ ಬೀರುತ್ತಿದ್ದು, ಕುಟುಂಬಗಳಲ್ಲಿ ಜಗಳ, ಅವ್ಯವಸ್ಥೆ ಹೆಚ್ಚಾಗಿದೆ.**

ಈ ಬಗ್ಗೆ ಹಲವು ಬಾರಿ ದೂರು ನೀಡಿದರೂ ಪೊಲೀಸರು ಯಾವುದೇ ಪರಿಣಾಮಕಾರಿ ಕ್ರಮ ಕೈಗೊಂಡಿಲ್ಲ ಎಂದು ಮಹಿಳೆಯರು ಆರೋಪಿಸಿದ್ದಾರೆ.

ಮಾಹಿತಿಯ ಪ್ರಕಾರ, ಈ ಎರಡು ಮದ್ಯದಂಗಡಿಗಳ ಮಾಲೀಕ ಒಬ್ಬನೇ ಆಗಿದ್ದಾನೆ ಎನ್ನಲಾಗಿದೆ.

**ವ್ಯಾಪಕ ಚರ್ಚೆ:**ಈ ಘಟನೆ ಮದ್ಯ ಮಾರಾಟ, ಸಾರ್ವಜನಿಕ ಸುರಕ್ಷತೆ ಮತ್ತು ಮಹಿಳೆಯರ ರಕ್ಷಣೆಯ ವಿಚಾರದಲ್ಲಿ ದೊಡ್ಡ ಚರ್ಚೆಗೆ ಕಾರಣವಾಗಿದೆ. ಮಹಿಳೆಯರ ಸಂಘಟಿತ ಆಕ್ರೋಶವು ಮದ್ಯ ನಿಷೇಧ ಹಾಗೂ ಸಾಮಾಜಿಕ ಶಿಸ್ತು ಕುರಿತು ಸರ್ಕಾರ ಮತ್ತು ಆಡಳಿತ ವ್ಯವಸ್ಥೆ ಗಂಭೀರವಾಗಿ ಚಿಂತಿಸಬೇಕಾದ ಅಗತ್ಯವಿದೆ ಎಂಬ ಸಂದೇಶವನ್ನು ನೀಡಿದೆ. ಮಹಿಳೆಯರ ಸ್ವರಕ್ಷಣೆ ಮತ್ತು ಸಾರ್ವಜನಿಕ ಸುರಕ್ಷತೆಯ ಪ್ರಶ್ನೆ ಮತ್ತೆ ಸಮಾಜದ ಮುಂದೆ ತೀವ್ರವಾಗಿ ನಿಲ್ಲಿಸಿದೆ.

# ಹೊಸ ಪಡಿತರ ಚೀಟಿ ಮಾಡಲು ರಾಜ್ಯ ಪಾಲರಿಗೆ ಮನವಿ
## ಸಾಮಾಜಿಕ ಕಾರ್ಯಕರ್ತ ಪವನ್ ಕುಮಾರ್ ಶಿರ್ವ



ರಾಜ್ಯದಲ್ಲಿ ಸುಮಾರು ಮೂರು – ನಾಲ್ಕು ವರ್ಷಾಗಳಿಂದ ಹೊಸ ಪಿಡಿತರ ಚೀಟಿ ಮಾಡಲು ಅವಕಾಶ ಸಿಗುತ್ತಿಲ್ಲ.. ಹೊಸ ಪಡಿತರ ಚೀಟಿ ಮಾಡಲು ಅರ್ಹತೆ ಇರುವ ಬಡವರು ಅದನ್ನೇ ನಂಬಿಕೊಂಡು ಜೀವನ ಮಾಡುವವರು ಪಡಿತರ ಚೀಟಿ ಇಲ್ಲದೆ ಕಂಗಳಾಗಿದ್ದಾರೆ.. ಬಡವರಲ್ಲಿಯೂ ಅಂಗವಿಕಲರು, ದುಡಿಯಲು ಸಾಮರ್ಥ್ಯವಿಲ್ಲದವರು, ಅನಾರೋಗ್ಯ ಪೀಡಿತರಿಗೆ ಇದು ಮುಖ್ಯ ಅವಶ್ಯಕವಾಗಿರುತ್ತದೆ... ಸರ್ಕಾರದಿಂದ ಸಿಗುವ ಪಡಿತರವನ್ನು ಪಡೆಯಲು, ಸರ್ಕಾರದ ಒಂದು ದೊಡ್ಡ ಉತ್ತಮ ಯೋಜನೆಯಾದ ಅಯುಷ್ಮಾನ್ ಭಾರತ್ ಅವರ ಉಪಯೋಗವನ್ನು ಪಡೆಯಲು, ಬಡ ಮಕ್ಕಳಿಗೆ ಶಿಕ್ಷಣವನ್ನು ಪಡೆಯಲು, ಹಾಗೂ ಸರ್ಕಾರದ ಮುಖ್ಯ ಸವಲತ್ತುಗಳನ್ನು ಪಡೆಯಲು ಜನರು ತುಂಬಾ ಸಮಸ್ಯೆಯನ್ನು ಅನುಭವಿಸುತ್ತಿದ್ದಾರೆ.. ಜೀವನ ದಲ್ಲಿ ಮುಖ್ಯ ದಾಖಲೆ ಪಡಿತರ ಚೀಟಿ ಆಗಿರುತ್ತದೆ.. ಸರ್ಕಾರದಿಂದ ಬರುವ ಹೊಸ ಹೊಸ ಯೋಜನೆ ಪಡೆಯಬೇಕಾದರೆ ಪಡಿತರ ಚೀಟಿ ಕಡ್ಡಾಯವಾಗಿರುತ್ತದೆ.. ಅದು ಇಲ್ಲದಿದ್ದಲ್ಲಿ ಆ ಮಹತ್ತರವಾದ ಯೋಜನೆ ಪಡೆಯಲು ಸಾಧ್ಯವಿಲ್ಲ.. ಆದ್ದರಿಂದ ನಾನು ಮುಖ್ಯಮಂತ್ರಿ ಅವರಿಗೂ ಹಾಗೂ ಆಹಾರ ಹಾಗೂ ನಾಗರಿಕ ಸಚಿವರಿಗೂ ಇದಕ್ಕೆ ಬಗ್ಗೆ ಲಿಖಿತವಾಗಿ ದೂರು ಸಲ್ಲಿಸಿದ್ದು ಯಾವುದೇ ರೀತಿಯ ಉತ್ತರ ಮತ್ತು ಪ್ರಯೋಜನ ಸಿಗಲಿಲ್ಲ.. ಆದ್ದರಿಂದ ತುರ್ತಾಗಿ ಅಲ್ಪ ಸಮಯವಾದರೂ ಅರ್ಹತೆ ಇರುವ ಬಡ ಕುಟುಂಬದವರಿಗೆ ಹೊಸ ಪಡಿತರ ಚೀಟಿ ಮಾಡಲು ಅವಕಾಶ ನೀಡಬೇಕು... ಸರ್ಕಾರ ಎಲ್ಲರೂ ಬಿಪಿಯಲ್ ಕಾರ್ಡ್ ಇದೆ ಎಂಬ ಒಂದೇ ಕಾರಣಕ್ಕೆ ಅರ್ಜಿ ಹಾಕುವುದನ್ನು ನಿಲ್ಲಿಸಿದ್ದಾರೇ... ಆದರೆ ಇದರಿಂದ ವಂಚಿತರಾದದ್ದು ಬಡ ಜನಾಂಗದವರು.. ಕಣ್ಣಿರಲ್ಲಿ ಊಟ ಮಾಡುವ ಪರಿಸ್ಥಿತಿ ಬಂದಿದೆ.. ಆದರಿಂದ ಇದನ್ನು ಮನಗಂಡ ಉಡುಪಿ ಜಿಲ್ಲೆಯ ಸಾಮಾಜಿಕ ಕಾರ್ಯಕರ್ತ ಪವನ್ ಕುಮಾರ್ ಶಿರ್ವ ಅವರು ರಾಜ್ಯಪಾಲರಿಗೆ ಪತ್ರ ಬರೆದು ಅರ್ಹತೆ ಇರುವವರಿಗೆ ಅಲ್ಪವಧಿಯಾದರೂ ಹೊಸ ಪಡಿತರ ಚೀಟಿ ಮಾಡಲು ಅವಕಾಶ ನೀಡಬೇಕು.. ಹಾಗೆಯೇ ೦ಕಐ ಪಡಿತರ ಚೀಟಿ ಮಾಡಲು ಅರ್ಹತೆ ಇರುವವರಿಗೂ ಕೂಡ ಅವಕಾಶ ಮಾಡಿಕೊಡಬೇಕು... ಈ ಬಗ್ಗೆ ತುರ್ತಾಗಿ ಗಮನಿಸಿ ಸರ್ಕಾರಕ್ಕೆ ನಿರ್ದೇಶನವನ್ನು ನೀಡಿ ರಾಜ್ಯದ ಜನತೆಗೆ ಅನುಕೂಲ ವಾಗುವ ರೀತಿಯಲ್ಲಿ ಮಾಡಿಕೋ ಡಬೇಕಾಗಿ ಅವರು ಪತ್ರ ಬರೆದಿದ್ದಾರೆ..

# ದೊಡ್ಡಬಳ್ಳಾಪುರ ನಾಗರಕೆರೆ ಪುನರುಜ್ಜೀವನಗೊಳಿಸಲು
# ಕ್ರಮ:ಡಿಸಿ ಎ.ಬಿ ಬಸವರಾಜು




**ದೊಡ್ಡಬಳ್ಳಾಪುರ:** ನಗರಸಭೆ ವ್ಯಾಪ್ತಿಯ ನಾಗರಕೆರೆ ಯನ್ನು ಪುನರಜ್ಜೀವನ ಗೊಳಿಸುವ ಸಂಬಂಧ ಫಾಕ್ಸ್ ಕಾನ್ ಸಂಸ್ಥೆ ರವರು ರೂ.03 ಕೋಟಿಯ ಸಿ.ಇ.ಆರ್ (ಕಾರ್ಪೋರೇಟ್ ಎನ್ವಿರಾನ್ಮೆಂಟ್ ರೆಸ್ಪಾನ್ಸಿಬಲ್) ಅನುದಾನದಡಿ ಅಭಿವೃದ್ಧಿ ಪಡಿಸಲು ಮುಂದಾಗಿದೆ ಎಂದು ಜಿಲ್ಲಾಧಿಕಾರಿ ಎಬಿ ಬಸವರಾಜು ಅವರು ತಿಳಿಸಿದರು.

ಜಿಲ್ಲಾಡಳಿತ ಭವನದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಕೆರೆ ಸಂರಕ್ಷಣೆಗೆ ಸಂಬಂಧಿಸಿದ ಏಕಗವಾಕ್ಷಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಫಾಕ್ಸ್ ಕಾನ್ ಸಂಸ್ಥೆಯವರು ನಾಗರಕೆರೆ ಪುನರುಜ್ಜೀವನಗೊಳಿಸುವ ಸಂಬಂಧ ವಿಸ್ತೃತ ಯೋಜನಾ ವರದಿ ಸಿದ್ಧಪಡಿಸಿದೆ. ಈ ಕುರಿತು ಇಂದು ವಿವಿಧ ಇಲಾಖೆಗಳ ಸಮನ್ವಯ ದೊಂದಿಗೆ ಕೂಲಂಕಷವಾಗಿ ಚರ್ಚಿಸಲಾಗಿದೆ.

ಕರೆ ಸಂರಕ್ಷಣೆ ಹಾಗೂ ಅಭಿವೃದ್ಧಿಗೆ ಸಂಬಂಧಿಸಿದಂತೆ ಕೈಗಳ್ಳಲಾಗುತ್ತಿರುವ ಕಾಮಗಾರಿಯ ಸಂಬಂಧ ವಿವಿದ ಇಲಾಖೆಯ ಅಧಿಕಾರಿ ಹಾಗೂ ಸಿಬ್ಬಂದಿಗಳಿಂದ ಸಲಹೆಗಳನ್ನು ಪಡೆದು ಅಂತಿಮವಾಗಿ ಫಾಕ್ಸ್ ಕಾನ್ ರವರು ಸಿಇಆರ್ (ಅನುದಾನದಡಿ ಸಿದ್ಧಪಡಿಸಲಾಗಿರುವ ವಿಸ್ತೃತ ಯೋಜನಾ ವರದಿಯನ್ನು ಅನುಮೋದನೆಗಾಗಿ ಸಣ್ಣ ನೀರಾವರಿ ಇಲಾಖೆಯ ಮೂಲಕ ಕೆರೆ ಅಭಿವೃದ್ಧಿ ಪ್ರಾಧಿಕಾರಕ್ಕೆ ಸಲ್ಲಿಸಲು ತೀರ್ಮಾನಿಸಲಾಗಿದೆ. ಅನುಮೋದನೆ ಬಂದ ನಂತರ ನಾಗರಕೆರೆ ಪುನರುಜ್ಜೀವನಗೊಳಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.

ಕೈಗಾರಿಕೆಗಳ ವಿಸ್ತೃತ ವರದಿ ನೀಡಲು ಸೂಚನೆ

ದೊಡ್ಡಬಳ್ಳಾಪುರ ವ್ಯಾಪ್ತಿಯಲ್ಲಿನ ಕೈಗಾ–ರಿಕೆಗಳು, ಕಾರ್ಖಾನೆಗಳಿಗೆ ಭೇಟಿ ನೀಡಿ ಅಲ್ಲಿನ ನೀರಿನ ಮೂಲ, ಮಳೆ ನೀರು ಕೊಯ್ಲು ಪದ್ಧತಿ ಅಳವಡಿಕೆ, ತ್ಯಾಜ್ಯ ವಿಲೇವಾರಿ ಘಟಕ ಸೇರಿದಂತೆ ಮಾಲಿನ್ಯ ನಿಯಂತ್ರಣಕ್ಕೆ ಕೈಗೊಂಡಿರುವ ಕ್ರಮಗಳ ಬಗ್ಗೆ ಖುದ್ದಾಗಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ ಮಾಹಿತಿ ಕಲೆಹಾಕಿ ವರದಿ ನೀಡಲು ಸಂಬಂಧಪಟ್ಟ ಅಧಿಕಾ–ರಿಗಳಿಗೆ ಡಿಸಿ ಸೂಚಿಸಿದರು.

ಸಭೆಯಲ್ಲಿ ಜಿಲ್ಲಾ ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕರಾದ ರಮೇಶ್.ಬಿ.ಎಸ್, ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಕಾರ್ಯಪಾಲಕ ಅಭಿಯಂತರರಾದ ಶ್ರೀಕಾಂತ್, ಸಣ್ಣ ನೀರಾವರಿ ಇಲಾಖೆ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಮಂಜುನಾಥ್, ಅಂತರ್ಜಲ ಇಲಾಖೆ ಹಿರಿಯ ಭೂ ವಿಜ್ಞಾನಿ ಪಲ್ಲವಿ ಪರಿಸರ ಅಧಿಕಾರಿ ವಿಜಯ,ಸಂಸ್ಥೆ ಅಧಿಕಾರಿಗಳು, ಸಿಬ್ಬಂದಿ ಹಾಜರಿದ್ದರು.

ಸುದ್ದಿ ಹಾಗೂ ಜಾಹೀರಾತುಗಾಳಿಗಾಗಿ ಸಂಪರ್ಕಿಸಿ 9538786812\8217606793

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.